RNI: KARKAN\2019\78042



ಸಂಪಾದಕರು : ಸಿ.ಎನ್.ಸಮಗಂಡಿ.

# ಸತ್ಯಮಿಥ್ಯ

ನಿಮ್ಮ ಪ್ರತಿಬಿಂಬ ಕನ್ನಡ ದಿನ ಪತ್ರಿಕೆ

Satyamithi Kannada Daily Morning

ಚನ್ನು ಮೆನ್ಸ್‌ವೇರ್
ಹೋಲ್ಸೇಲ್‌ದರ ಶಾಪ್.
ಚನ್ನು ಸ್ಟಿಚ್‌ವರ್ಲ್ಡ್
ಬಿ.ಎಸ್.ಎನ್.ಎಲ್. ಆಫೀಸ್ ಹತ್ತಿರ,
ಜೆಂಟ್ಸ್ ಸ್ಪೆಷಲಿಸ್ಟ್ ಟೇಲರ್
ಗಜೇಂದ್ರಗಡ-582114.
ಸೆಲ್ : 9986982482, 9686165708

ಅನ್ನದಾತರ ಪರ ವಿಶೇಷ ಅಧಿವೇಶನ ವಿಫಲ: ನಡಹಳ್ಳಿ » 2

ಸರ್ಕಾರವೇ ಜನರ ಬಾಗಿಲಿಗೆ: ಗೋಕಾವಿಯಲ್ಲಿ ಪ್ರಜಾ ಸೇವಾ ಆಂದೋಲನಕ್ಕೆ ಚಾಲನೆ » 3

ಮೂರ್ತಿ ತೆರವಿಗೆ ಕುಮ್ಮಕ್ಕು ನೀಡಿದವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಿ: ಪ್ರಭು ಚವಡಿ » 4

ಸಂಪುಟ(Volume): 1 ಸಂಚಿಕೆ (Issue): 79 ● ಪುಟ (Page): 4 ● ದರ: Rs. 4 ಬುಧವಾರ 30 ಸೆಪ್ಟೆಂಬರ್ 2026 ● 30 SEPTEMBER 2026 ● ಧಾರವಾಡ ● ಹಾವೇರಿ ● ಗದಗ ● ಕೊಪ್ಪಳ ● ವಿಜಯನಗರ ● ರಾಯಚೂರು ● ವಿಜಯಪುರ ● ಬಾಗಲಕೋಟೆ

# ನೈಸ್ ಅಕ್ರಮ 2ಜಿ, ಕೋಲ್ ಸ್ಕ್ಯಾಮ್‌ಗಿಂತ ದೊಡ್ಡದು

## ಡಿಕೆಶಿ ವಿರುದ್ಧ ಆಡಿಯೋ ಬಾಂಬ್ ಸಿಡಿಸಿದ ಹೆಚ್.ಡಿ. ಕುಮಾರಸ್ವಾಮಿ



**ಸತ್ಯಮಿಥ್ಯ ನ್ಯೂಸ್ ಡೆಸ್ಕ್ ಬೆಂಗಳೂರು:**
ನೈಸ್ ಯೋಜನೆಯ ವಿವಾದಕ್ಕೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ವಿರುದ್ಧ ತೀವ್ರ ವಾಗ್ದಾಳಿ ನಡೆಸಿರುವ ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಅವರು, ಆಡಿಯೋವೊಂದನ್ನು ಬಿಡುಗಡೆ ಮಾಡುವ ಮೂಲಕ ಹೊಸ ಬಾಂಬ್ ಸಿಡಿಸಿದ್ದಾರೆ.

ಬೆಂಗಳೂರಿನ ಖಾಸಗಿ ಹೋಟೆಲ್‌ನಲ್ಲಿ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಕುಮಾರಸ್ವಾಮಿ, "ನೈಸ್ ಯೋಜನೆ ದೇವೇಗೌಡರ ಕೂಸು ಎಂದು ಸಿಎಂ ಡಿ.ಕೆ. ಶಿವಕುಮಾರ್ ಹೇಳುತ್ತಾರೆ. ಆದರೆ, ಇದು 2ಜಿ ಸ್ಕ್ಯಾಮ್ ಹಾಗೂ ಕೋಲ್ ಸ್ಕ್ಯಾಮ್‌ಗಿಂತಲೂ ದೊಡ್ಡ ಹಗರಣ" ಎಂದು ಆಕ್ರೋಶ ವ್ಯಕ್ತಪಡಿಸಿದರು. ತಮ್ಮ ಗಂಭೀರ ಆರೋಪಗಳಿಗೆ ಸಂಬಂಧಿಸಿದಂತೆ ಅವರು ಹಲವು ದಾಖಲೆಗಳನ್ನೂ ಬಿಡುಗಡೆ ಮಾಡಿದರು.

"2003ರಲ್ಲಿ ಡಿ.ಕೆ. ಶಿವಕುಮಾರ್ ಅವರ ಆಸ್ತಿ 4 ಕೋಟಿ ರೂಪಾಯಿ ಇತ್ತು. ಆದರೆ 2023ರ ವೇಳೆಗೆ ಅದು 1,413 ಕೋಟಿ ರೂಪಾಯಿಗೆ ಏರಿಕೆಯಾಗಿದೆ. ಒಡಿಪಿ (ಭೂಮಿಯ ಬಳಕೆ ಉದ್ದೇಶ) ಬದಲಾವಣೆ ಮಾಡಿದ್ದೇ ಇದಕ್ಕೆ ಕಾರಣ" ಎಂದು ದೂರಿದ ಅವರು, 2003ರಿಂದ 2023ರವರೆಗಿನ ದಾಖಲೆಗಳನ್ನು ಪ್ರದರ್ಶಿಸಿದರು.

**ಕುಟುಂಬದ ವಿರುದ್ಧ ಭೂಕಬಳಿಕೆ ಆರೋಪ:** ಡಿ.ಕೆ. ಶಿವಕುಮಾರ್ ಅವರ ಕುಟುಂಬದ ವಿರುದ್ಧ ಭೂಕಬಳಿಕೆ ಆರೋಪ ಮಾಡಿದ ಕುಮಾರಸ್ವಾಮಿ, "2004ರ ನವೆಂಬರ್ 3ರಂದು ಸರ್ಕಾರದ ಆಸ್ತಿಯನ್ನು ಡಿ.ಕೆ. ಸುರೇಶ್ ಖರೀದಿಸಿದ್ದರು. ಯಾರದ್ದೋ ಹೆಸರಿನಲ್ಲಿದ್ದ ಸುಮಾರು 10 ಎಕರೆ ಭೂಮಿಯನ್ನು ಖರೀದಿ ಮಾಡಲಾಗಿದ್ದು, ಅದು ಸರ್ಕಾರದ ಯೋಜನೆಗೆ 1997ರಲ್ಲೇ ನೋಟಿಫೈ ಆಗಿದ್ದ ಭೂಮಿಯಾಗಿದೆ. ಅದನ್ನು 2026ರಲ್ಲಿ ಸಿಎಂ ಡಿ.ಕೆ. ಶಿವಕುಮಾರ್ ಅವರ ಪುತ್ರಿ ಆಭರಣ ಖರೀದಿ ಮಾಡುತ್ತಾರೆ. ಹೀಗೆ ಕುಟುಂಬಸ್ಥರ ಹೆಸರಿನಲ್ಲಿ ಭೂಮಿಯನ್ನು ಗುಳುಂ ಮಾಡಿದ್ದಾರೆ" ಎಂದು ಆರೋಪಿಸಿದರು.

ಅಲ್ಲದೆ, "ಅಧಿಕಾರಿಗಳಿಗೆ ಬೆದರಿಕೆ ಹಾಕಿ 150 ರಿಂದ 200 ಎಕರೆಗೂ ಹೆಚ್ಚು ಗೋಮಾಳ ಭೂಮಿಯನ್ನು ತಮ್ಮ ಹೆಸರಿಗೆ ಬರೆಸಿಕೊಂಡಿದ್ದಾರೆ. ಅವೆಲ್ಲವೂ ನೈಸ್ ಕಂಪನಿಯ ವ್ಯಾಪ್ತಿಯ ಭೂಮಿಯಾಗಿದ್ದು, ಕೆಐಎಡಿಬಿ ಸ್ವಾಧೀನಪಡಿಸಿಕೊಂಡಿದ್ದ ಭೂಮಿ ಈಗ ಇವರ ಹೆಸರಿನಲ್ಲಿದೆ. ನಾನು ಬ್ಲ್ಯಾಕ್ ಮೇಲ್ ಮಾಡುತ್ತಿದ್ದೇನೆ ಎಂದು ಶಿವಕುಮಾರ್ ಹೇಳುತ್ತಾರೆ. ಹೌದು, ನಾನು ಬ್ಲ್ಯಾಕ್‌ಮೇಲ್ ಮಾಡುತ್ತಿರುವುದು ನಿಜ, ಆದರೆ ಅಕ್ರಮವಾಗಿ ಭೂಮಿ ಖರೀದಿಸಿದ್ದೀರಲ್ಲ ಅದಕ್ಕೆ ಮೊದಲು ಉತ್ತರ ಕೊಡಿ" ಎಂದು ಸವಾಲು ಹಾಕಿದರು.

**ಡಿ.ಕೆ.ಶಿ – ಅಶೋಕ್ ಖೇಣಿ ಆಡಿಯೋ ಬಿಡುಗಡೆ:** ಡಿ.ಕೆ. ಶಿವಕುಮಾರ್ ಹಾಗೂ ಅಶೋಕ್ ಖೇಣಿ ಮಾತನಾಡಿದ್ದಾರೆ ಎನ್ನಲಾದ ಆಡಿಯೋವನ್ನು ಇದೇ ವೇಳೆ ಕುಮಾರಸ್ವಾಮಿ ಬಿಡುಗಡೆ ಮಾಡಿದರು. ಆಡಿಯೋದಲ್ಲಿ ಅಶೋಕ್ ಖೇಣಿ ಅವರು, "ವಿಧಾನಸೌಧ ಅಥವಾ ವಿಕಾಸಸೌಧವನ್ನು ನನಗೆ ಬರೆದು ಕೊಡಬೇಕಾಗುತ್ತದೆ. ನನಗೆ 2 ಲಕ್ಷ ಕೋಟಿ ರೂಪಾಯಿ ಕೊಡಬೇಕಾಗುತ್ತದೆ. ಈ ಸರ್ಕಾರ ಗ್ಯಾರಂಟಿಗಳಿಗೆ ಹಣ ಕೊಟ್ಟು ಬರಬಾದಾಗಿದೆ, ನನಗೆ ಎಲ್ಲಿಂದ ಹಣ ಕೊಡಲು ಸಾಧ್ಯ? ವ್ಯಾಜ್ಯ ಎಂದು ಕೋರ್ಟ್‌ಗೆ ಹೋದರೆ ವಿಧಾನಸೌಧವನ್ನೇ ಬರೆದು ಕೊಡಬೇಕಾಗುತ್ತದೆ" ಎಂದು ಹೇಳಿದ್ದಾರೆ ಎನ್ನಲಾಗಿದೆ.

**'ಕೆಜಿಎಫ್–3 ತರಹ ಪಾರ್ಟ್ 2, ಪಾರ್ಟ್ 3 ಬರುತ್ತೆ':** "ಇದು ಕೇವಲ ಪಾರ್ಟ್ 1 ಅಷ್ಟೇ. ಶೀಘ್ರದಲ್ಲೇ ಪಾರ್ಟ್ 2 ಮತ್ತು ಪಾರ್ಟ್ 3 ಕೂಡ ಬಿಡುಗಡೆ ಮಾಡಲಾಗುವುದು. ಇವತ್ತು ಬಿಡುಗಡೆ ಮಾಡಿರುವುದು ಸಣ್ಣ ವಿಚಾರ, ಮುಂದೆ ಅಲ್ಲೋಲ ಕಲ್ಲೋಲ ಆಗುವುದು ಬಾಕಿ ಇದೆ. ನಾನು ಎಲ್ಲೂ ಹೋಗುವುದಿಲ್ಲ. ಕೆಜಿಎಫ್ 3 ಮಾದರಿಯಲ್ಲಿ ಮುಂದಿನ ಭಾಗಗಳು ಬರಲಿವೆ" ಎಂದು ಹೆಚ್.ಡಿ. ಕುಮಾರಸ್ವಾಮಿ ಎಚ್ಚರಿಸಿದ್ದಾರೆ.



# ದೆಹಲಿ ಆಹ್ವಾನ ತಿರಸ್ಕರಿಸಿದ ರೈತರು!

## ಕಬ್ಬಿಗೆ ರೂ. 5,500 ಈಡೇರಿಕೆಗೆ ಪಟ್ಟು: ಹುಬ್ಬಳ್ಳಿಯಲ್ಲಿ ಬೆಳೆಗಾರರ ಬೃಹತ್ ಗರ್ಜನೆ

**ಸತ್ಯಮಿಥ್ಯ ಸುದ್ದಿಮೂಲಹುಬ್ಬಳ್ಳಿ:**
ಕಬ್ಬಿಗೆ ಸೂಕ್ತ ಬೆಂಬಲ ಬೆಲೆ ಹಾಗೂ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಕರ್ನಾಟಕ ರಾಜ್ಯ ರೈತ ಸಂಘ ಮತ್ತು ಹಸಿರು ಸೇನೆಯ ನೇತೃತ್ವದಲ್ಲಿ ಸಾವಿರಾರು ಕಬ್ಬು ಬೆಳೆಗಾರರು ಮಂಗಳವಾರ ನಗರದ ರಾಣಿ ಚೆನ್ನಮ್ಮ ವೃತ್ತದಲ್ಲಿ ಬೃಹತ್ ಪ್ರತಿಭಟನೆ ನಡೆಸಿದರು. ಕಬ್ಬಿನ 'ನ್ಯಾಯಯುತ ಮತ್ತು ಲಾಭದಾಯಕ ಬೆಲೆ'ಯನ್ನು (ಈಖಕ) ಪರಿಷ್ಕರಿಸಿ, ಕನಿಷ್ಠ ಬೆಲೆಯನ್ನು ಪ್ರತಿ ಟನ್‌ಗೆ 5,500 ರೂ.ಗೆ ನಿಗದಿಪಡಿಸಬೇಕು ಹಾಗೂ ಸ್ವಾಮಿನಾಥನ್ ಸಮಿತಿಯ ಶಿಫಾರಸುಗಳನ್ನು ಸಂಪೂರ್ಣವಾಗಿ ಜಾರಿಗೆ ತರಬೇಕು ಎಂದು ಪ್ರತಿಭಟನಾಕಾರರು ಆಗ್ರಹಿಸಿದರು. ಇದರೊಂದಿಗೆ ಕೃಷಿ ಉತ್ಪನ್ನಗಳಿಗೆ ವೈಜ್ಞಾನಿಕ ಬೆಲೆ ನಿಗದಿ, ದೀರ್ಘಕಾಲದಿಂದ ನೆನೆಗುದಿಗೆ ಬಿದ್ದಿರುವ ಮಹದಾಯಿ ಯೋಜನೆಯ ಅನುಷ್ಠಾನ, ರೈತರ ಸಾಲ ಸಂಪೂರ್ಣ ಮನ್ನಾ ಹಾಗೂ ಉತ್ತರ ಪ್ರದೇಶ ಮತ್ತು ಗುಜರಾತ್ ಮಾದರಿಯಲ್ಲಿ ಶೇ. 100 ರಷ್ಟು ಎಥೆನಾಲ್ ಸಂಗ್ರಹಣೆಗೆ ಒತ್ತಾಯಿಸಿದರು.

**ಸಚಿವರ ಆಹ್ವಾನ ತಿರಸ್ಕರಿಸಿದ ರೈತರು:** ಪ್ರತಿಭಟನೆಯ ಮಾಹಿತಿ ಇದ್ದರೂ ನಗರದಲ್ಲಿ ಇರದಿದ್ದಕ್ಕಾಗಿ ತೀವ್ರ ಟೀಕೆಗೆ ಗುರಿಯಾದ ಕೇಂದ್ರ ಆಹಾರ, ಸಾರ್ವಜನಿಕ ವಿತರಣೆ ಮತ್ತು ಗ್ರಾಹಕ ವ್ಯವಹಾರಗಳ ಸಚಿವ ಪ್ರಲ್ಹಾದ್ ಜೋಶಿ, ಸಮಸ್ಯೆ ಚರ್ಚಿಸಲು ದೆಹಲಿಗೆ ಬರುವಂತೆ ಸಾಮಾಜಿಕ ಜಾಲತಾಣದ ಮೂಲಕ ರೈತರಿಗೆ ಆಹ್ವಾನ ನೀಡಿದ್ದರು. ಆದರೆ, ರೈತರು ಈ ಆಹ್ವಾನವನ್ನು ತಕ್ಷಣವೇ ನಿರಾಕರಿಸಿದ್ದಾರೆ.

ಈ ಕುರಿತು ಆಕ್ರೋಶ ಹೊರಹಾಕಿದ ರೈತ ಮುಖಂಡ ಶಶಿಕಾಂತ್ ಗುರೂಜಿ, "ಸಚಿವರ ಆದೇಶ ಪಾಲಿಸಲು ನಾವೇನು ಬಿಜೆಪಿ ಕಾರ್ಯಕರ್ತರಲ್ಲ. ಸಚಿವರೇ ಸ್ವತಃ ಪ್ರತಿಭಟನಾ ಸ್ಥಳಕ್ಕೆ ಬಂದು, ಸಿದ್ಧಾರೂಢ ಸ್ವಾಮೀಜಿಯವರ ಮೇಲೆ ಆಣೆ ಮಾಡಿ ಬೇಡಿಕೆ ಈಡೇರಿಸುವ ಭರವಸೆ ನೀಡಬೇಕು. ಸಂಜೆಯೊಳಗೆ ಬರದಿದ್ದರೆ ಪ್ರತಿಭಟನೆಯ ಸ್ವರೂಪ ಬದಲಾಯಿಸಲಾಗುವುದು," ಎಂದು ಎಚ್ಚರಿಸಿದರು. ಕೇಂದ್ರ ಸರ್ಕಾರ ತಮ್ಮನ್ನು ಭೇಟಿಯಾಗಿ ಬೇಡಿಕೆ ಈಡೇರಿಸುವವರೆಗೆ ಹೋರಾಟ ಮುಂದುವರಿಯಲಿದೆ ಎಂದರು.

ನೆರೆ ರಾಜ್ಯದ ಮುಖಂಡರ ಬೆಂಬಲ:
ಈ ಬೃಹತ್ ಹೋರಾಟದಲ್ಲಿ ರಾಜ್ಯದ ವಿವಿಧ ಭಾಗಗಳ ಬೆಳೆಗಾರರಷ್ಟೇ ಅಲ್ಲದೆ, ನೆರೆಯ ಮಹಾರಾಷ್ಟ್ರದ 'ಶೆಟ್ಕರಿ ಸಂಘಟನೆ'ಯ ನಾಯಕ ರಾಜು ಶೆಟ್ಟಿ ನೇತೃತ್ವದಲ್ಲಿ ಆ ಸಂಘಟನೆಯ ಸದಸ್ಯರೂ ಸಕ್ರಿಯವಾಗಿ ಭಾಗವಹಿಸಿದ್ದರು.

**ರೈತ ನಾಯಕರ ಆಕ್ರೋಶ:** ಕರ್ನಾಟಕ ರಾಜ್ಯ ರೈತ ಸಂಘದ ರಾಜ್ಯ ಅಧ್ಯಕ್ಷ ಚನ್ನಪ್ಪ ಪೂಜಾರಿ ಮಾತನಾಡಿ, "ಒಂದು ಟನ್ ಕಬ್ಬು ಬೆಳೆಯಲು ಸುಮಾರು 4,500 ರೂ. ವೆಚ್ಚವಾಗುತ್ತಿದ್ದು, ಸಕ್ಕರೆ ದರ ಹಾಗೂ ಉತ್ಪಾದನಾ ವೆಚ್ಚಕ್ಕೆ ಅನುಗುಣವಾಗಿ ರೈತರಿಗೆ ಸೂಕ್ತ ಆದಾಯ ಸಿಗುತ್ತಿಲ್ಲ," ಎಂದು ಬೇಸರ ವ್ಯಕ್ತಪಡಿಸಿದರು. ರೈತರ ಆದಾಯ ದ್ವಿಗುಣಗೊಳಿಸುವ ಮತ್ತು ಸ್ವಾಮಿನಾಥನ್ ವರದಿ ಜಾರಿಯ ಭರವಸೆಗಳನ್ನು ಈಡೇರಿಸುವಲ್ಲಿ ಸರ್ಕಾರಗಳು ವಿಫಲವಾಗಿವೆ ಎಂದು ಸಂಘದ ಕಾರ್ಯದರ್ಶಿ ವಿದ್ಯಾಸಾಗರ್ ಆರೋಪಿಸಿದರು. ರಸಗೊಬ್ಬರ ಬೆಲೆ ಏರಿಕೆಯಿಂದಾಗಿ ಕೃಷಿ ವೆಚ್ಚ ಹೆಚ್ಚಾಗಿದ್ದು, ರೈತರು ತೀವ್ರ ಸಂಕಷ್ಟದಲ್ಲಿದ್ದಾರೆ ಎಂದು ತಿಳಿಸಿದರು.

# ಮುಂದಿನ ಸಲ ಪ್ರದೀಪ ಈಶ್ವರಗೆ ಟಿಕೆಟ್ ನೀಡಬೇಡಿ



**ಚಿಕ್ಕಬಳ್ಳಾಪುರ:** 25 ವರ್ಷಗಳ ಬಳಿಕ ನಾನು ಸಿಎಂ ಆಗಬೇಕು ಎಂಬ ಆಸೆ ಇದೆ ಎಂದು ಹೇಳಿದ್ದ ಶಾಸಕ ಪ್ರದೀಪ್ ಈಶ್ವರ್ ಅವರಿಗೆ ಸೋಮವಾರ ಕಾಂಗ್ರೆಸ್ ಮುಖಂಡರೇ ಬಿಗ್ ಶಾಕ್ ನೀಡಿದ್ದು, ಮುಂದಿನ ಬಾರಿ ಅವರಿಗೆ ಟಿಕೆಟ್ ನೀಡಬೇಡಿ ಎಂದು ಕರ್ನಾಟಕ ಪ್ರದೇಶ ಕಾಂಗ್ರೆಸ್(ಕೆಪಿಸಿಸಿ) ಅಧ್ಯಕ್ಷರಿಗೆ ದೂರು ನೀಡಿದ್ದಾರೆ.

ಶಾಸಕ ಪ್ರದೀಪ್ ಈಶ್ವರ್ ಅವರ ಕಾರ್ಯವೈಖರಿ, ಪಕ್ಷ ಸಂಘಟನೆ ಹಾಗೂ ಸ್ಥಳೀಯ ಚುನಾವಣೆಗಳ ಕುರಿತು ಹಲವು ಅಹವಾಲುಗಳನ್ನು ಕೆಪಿಸಿಸಿ ಅಧ್ಯಕ್ಷರಿಗೆ ಸಲ್ಲಿಸಲಾಗಿದೆ ಎಂದು ತಿಳಿದುಬಂದಿದೆ.

ಪ್ರದೀಪ್ ಈಶ್ವರ್ ಕ್ಷೇತ್ರಕ್ಕೆ ಸರಿಯಾಗಿ ಬರುತ್ತಿಲ್ಲ. ಕಾಂಗ್ರೆಸ್ ಮುಖಂಡರು ಹಾಗೂ ಕಾರ್ಯಕರ್ತರ ಕರೆಗಳಿಗೆ ಸರಿಯಾಗಿ ಸ್ಪಂದಿಸುತ್ತಿಲ್ಲ ಎಂದು ಆರೋಪಗಳ ಸುರಿಮಳೆ ಸುರಿಸಿದ್ದಾರೆ. ನಿಷ್ಠಾವಂತ ಕಾರ್ಯಕರ್ತರಿಗೆ ನಾಮನಿರ್ದೇಶನ ಸ್ಥಾನಗಳನ್ನು ನೀಡುತ್ತಿಲ್ಲ. ಸ್ಥಳೀಯ ಚುನಾವಣೆಗಳಲ್ಲಿ ಶಾಸಕರು ಸಕ್ರಿಯವಾಗಿ ತೊಡಗಿಸಿಕೊಳ್ಳುತ್ತಿಲ್ಲ. ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಕಾಂಗ್ರೆಸ್‌ಗೆ ಹಿನ್ನಡೆಯಾಗಿದೆ ಎಂದು ಅವರು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಈ ಎಲ್ಲ ವಿಚಾರಗಳನ್ನು ಕೆಪಿಸಿಸಿ ಅಧ್ಯಕ್ಷರ ಗಮನಕ್ಕೆ ತರಲಾಗಿದ್ದು, ಮುಂದಿನ ಚುನಾವಣೆಯಲ್ಲಿ ಪ್ರದೀಪ್ ಈಶ್ವರ್‌ಗೆ ಟಿಕೆಟ್ ನೀಡಬಾರದು ಎಂದು ಮುಖಂಡರು ಒತ್ತಾಯಿಸಿದ್ದಾರೆ.

# ಬಿಜೆಪಿಗೆ ಹೋಗುವವರನ್ನು ವಾಷಿಂಗ್ ಮಷಿನ್‌ಗೆ ಹಾಕಿದರೆ ಎಲ್ಲವೂ ಕ್ಲೀನ್ ಆಗುತ್ತದೆ

**ಕಾರವಾರ:** ಯಾರೆಲ್ಲಾ ಬಿಜೆಪಿಗೆ ಹೋಗುತ್ತಾರೋ ಅವರನ್ನು ವಾಷಿಂಗ್ ಮಿಷನ್‌ಗೆ ಹಾಕಿದರೆ ಎಲ್ಲವೂ ಕ್ಲೀನ್ ಆಗುತ್ತದೆ. ನನ್ನನ್ನೂ ವಾಷಿಂಗ್ ಮಷಿನ್‌ನಲ್ಲಿ ಹಾಕಿದ್ದರು ಎಂದು ಬಿಜೆಪಿ ಉಚ್ಚಾಟಿತ ಯಲ್ಲಾಪುರ ಶಾಸಕ ಶಿವರಾಮ ಹೆಬ್ಬಾರ ವ್ಯಂಗ್ಯವಾಡಿದರು . ಸೋಮವಾರ ಕೇಂದ್ರ ಚುನಾವಣಾ ಆಯುಕ್ತರ ವಿರುದ್ಧ ಕಾಂಗ್ರೆಸ್ ಆಯೋಜಿಸಿದ್ದ ಪ್ರತಿಭಟನೆಯಲ್ಲಿ ಮೊದಲ ಬಾರಿಗೆ ಮುಕ್ತವಾಗಿ ಪಾಲ್ಗೊಂಡರು. ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಬಿಜೆಪಿ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದರು. ಸಿಬಿಐ, ಇಡಿ ಹಾಗೂ ಚುನಾವಣಾ ಆಯೋಗ ಸೇರಿದಂತೆ ತನಿಖಾ ಸಂಸ್ಥೆಗಳನ್ನು ಬಿಜೆಪಿ ದುರುಪಯೋಗಪಡಿಸಿಕೊಳ್ಳುತ್ತಿದೆ. ಕೇಂದ್ರ ಚುನಾವಣಾ ಆಯೋಗ ನಡೆಸುತ್ತಿರುವ ನೀತಿಯು ಪ್ರಜಾಪ್ರಭುತ್ವದ ಕಗ್ಗೊಲೆಯಾಗಿದೆ. ಚುನಾವಣಾ ಆಯೋಗದ ಅಧಿಕಾರಿಗಳು ಸಭೆ ಸೇರಿಲ್ಲ, ಅವರನ್ನು ತಗೊಂಡು ಹೋಗಿ ಕೂರಿಸಿದ್ದಾರೆ. ರಾಜಕೀಯ ಪಕ್ಷದಲ್ಲಿ ಭಿನ್ನಾಭಿಪ್ರಾಯ ಇದ್ದಾಗ ಪತ್ರಿಕಾಗೋಷ್ಠಿ ಮಾಡಿಸಿದಂತೆ ಇದು ಎಂದರು. ಸಿಬಿಐ, ಇಡಿ, ಚುನಾವಣಾ ಆಯೋಗವನ್ನು ಬಿಜೆಪಿಯು ಜೇಬಲ್ಲಿಇಟ್ಟುಕೊಂಡು ಕೆಲಸ ಮಾಡಿಕೊಂಡು ಹೋದರೆ ಎಲ್ಲವೂ ಕಾಂಗ್ರೆಸ್ ಮೇಲೆಯೇ ದಬ್ಬಾಳಿಕೆಯಾಗುತ್ತದೆ. ಸತೀಶ್ ಸೈಲ್, ಜಾರಕಿಹೊಳಿ ಸೇರಿದಂತೆ ಕಾಂಗ್ರೆಸ್‌ನ ಮುಖ್ಯಮಂತ್ರಿ, ಸಚಿವರು ಹಾಗೂ ಶಾಸಕರ ಮೇಲೆ ರೇಡ್‌ಗಳು ನಡೆಯುತ್ತವೆ. ಬಿಜೆಪಿಗರು ಎಲ್ಲರೂ ದೇಶದಲ್ಲಿ ಹರಿಶ್ಚಂದ್ರರು, ಕಾಂಗ್ರೆಸ್‌ನವರು ಮಾತ್ರ ಕಳ್ಳರು ಎನ್ನುವ ರೀತಿಯಾಗಿದೆ ಎಂದು ವ್ಯಂಗ್ಯವಾಡಿದರು.

# ಗದಗ-ಬೆಟಗೇರಿಗೆ ಸಮರ್ಪಕ ನೀರು ಪೂರೈಕೆಗೆ ಆಗ್ರಹ: ಹೋಮ ನೆರವೇರಿಸಿ ಬಿಜೆಪಿ ಆಕ್ರೋಶ

**ಸತ್ಯಮಿಥ್ಯ ಸುದ್ದಿಮೂಲ ಗದಗ:**
ಗದಗ-ಬೆಟಗೇರಿ ಅವಳಿ ನಗರಕ್ಕೆ ಸಮರ್ಪಕವಾಗಿ ನೀರು ಪೂರೈಕೆ ಮಾಡುವಂತೆ ಆಗ್ರಹಿಸಿ ಬಿಜೆಪಿ ಜಿಲ್ಲಾ ಘಟಕದ ವತಿಯಿಂದ ನಗರದ ಹುಯಿಲಗೋಳ ನಾರಾಯಣರಾವ ವೃತ್ತದಲ್ಲಿ ಹೋಮ ನೆರವೇರಿಸಿ ಆಕ್ರೋಶ ವ್ಯಕ್ತಪಡಿಸಲಾಯಿತು.

ಸಮರ್ಪಕವಾಗಿ ನೀರು ಪೂರೈಸದೆ ಶಾಸಕ ಎಚ್. ಕೆ. ಪಾಟೀಲ ಅವರು ಅವಳಿ ನಗರಕ್ಕೆ ಅನ್ಯಾಯ ಮಾಡಿದ್ದಾರೆ.

ಇನ್ನೊಂದು ವಾರದಲ್ಲಿ ನೀರು ಪೂರೈಸದಿದ್ದರೆ ಅವರು ಶಾಸಕ ರಾಜೀನಾಮೆ ನೀಡಬೇಕು ಎಂದು ಆಗ್ರಹಿಸಲಾಯಿತು.

ಪ್ರತಿಭಟನಾನಿರತರು ಖಾಲಿ ಕೊಡಗಳನ್ನು ಪ್ರದರ್ಶಿಸಿದರು. ತಮಟೆ, ಹಲಗಿ ಬಾರಿಸುತ್ತ, ಮಹಾತ್ಮ ಗಾಂಧಿ ವೃತ್ತದವರೆಗೆ ಪ್ರತಿಭಟನಾ ಮೆರವಣಿಗೆ ನಡೆಸಲಾಯಿತು. ವೃತ್ತದಲ್ಲಿ ಮಾನವ ಸರಪಳಿ ನಿರ್ಮಿಸಲಾಯಿತು. ಜಿಲ್ಲಾಧಿಕಾರಿ ಸ್ಥಳಕ್ಕೆ ಬಂದು ಮನವಿ ಸ್ವೀಕರಿಸಿ, ನೀರು ಪೂರೈಕೆಯ ಭರವಸೆ ನೀಡುವವರೆಗೆ ಪ್ರತಿಭಟನೆ ಹಿಂಪಡೆಯುವುದಿಲ್ಲವೆಂದು ಪಟ್ಟು ಹಿಡಿದರು.



# ಚಹಾ ಕೊಟ್ಟು ಅಜ್ಜಿ ಚಿನ್ನ ಎಗರಿಸಿ ಕಿರಾತಕ

**ಬೆಂಗಳೂರು:** ಸ್ಯಾಟಲೈಟ್ ಬಸ್ ನಿಲ್ದಾಣದಿಂದ ಮೈಸೂರಿನಲ್ಲಿ ತನ್ನ ಮಗಳ ಮನೆಗೆ ಪ್ರಯಾಣ ಬೆಳೆಸಿದ್ದ ವೃದ್ದೆಗೆ ಬಸ್ ಪ್ರಯಾಣ ದುಬಾರಿಯಾಗಿ ಪರಿಣಮಿಸಿದ್ದು, ತನ್ನ ಪಕ್ಕದಲ್ಲೇ ಕುಳಿತಿದ್ದ ಸಹಪ್ರಯಾಣಿಕ ವ್ಯಕ್ತಿಯೋರ್ವ ಆಕೆಗೆ ಟೀ ಕೊಟ್ಟು ಪುಸಲಾಯಿಸಿ ಬಳಿಕ ಆಕೆಯ ಬಳಿಯಿದ್ದ ಬರೋಬ್ಬರಿ 29 ಗ್ರಾಂ ಚಿನ್ನದ ಸರ ಕದ್ದಿರುವ ಘಟನೆ ನಡೆದಿದೆ.

ಬಸ್‌ನಲ್ಲಿ ವೃದ್ಧೆಗೆ ಟೀ ಕೊಟ್ಟು ಚಿನ್ನ ಕದ್ದ ಸಹಪ್ರಯಾಣಿಕ ಹೀಗೆ ಬಸ್‌ನಲ್ಲಿ ಚಿನ್ನದ ಸರ ಕಳೆದುಕೊಂಡಿರುವ ವೃದ್ದೆಯನ್ನು ಚೆನ್ನಮ್ಮ ಎಂದು ಗುರುತಿಸಲಾಗಿದ್ದು, ಈಕೆ ಮೈಸೂರಿನಲ್ಲಿರುವ ತನ್ನ ಮಗಳ ಮನೆಗೆ ಹೋಗಲೆಂದು ದೊಡ್ಡಬಳ್ಳಾಪುರದ ತಿಮ್ಮನಹಳ್ಳಿಯಿಂದ ಸೆ.25ರಂದು ಬೆಳ್ಳಗೆ 5:30ರ ಸುಮಾರಿಗೆ ಹೊರಟ್ಟಿದ್ದು, ಬೆಳ್ಳಗೆ 8ಗಂಟೆ ಸುಮಾರಿಗೆ ಸ್ಯಾಟಲೈಟ್ ಬಸ್ ನಿಲ್ದಾಣಕ್ಕೆ ತಲುಪಿ ಟಿಕೆಟ್ ತೆಗೆದುಕೊಂಡು ಬಸ್ ಹತ್ತಿದ್ದಾರೆ.

ಹೀಗೆ ಮೈಸೂರಿಗೆ ಹೋಗುವ ಬಸ್‌ನಲ್ಲಿ ಕುಳಿತಿದ್ದ ಚೆನ್ನಮ್ಮರ ಪಕ್ಕದಲ್ಲೇ ಕಪ್ಪು ಪ್ಯಾಂಟ್ ಹಾಗೂ ಬಿಳಿ ಶರ್ಟ್ ಧರಿಸಿದ್ದ 45 ವರ್ಷದ ವ್ಯಕ್ತಿಯೋರ್ವ ಸಹಪ್ರಯಾಣಿಕನ ಸೋಗಿನಲ್ಲಿ ಬಂದು ಕುಳಿತಿದ್ದು, ಆಕೆಯೊಂದಿಗೆ ಸ್ನೇಹ ಬೆಳೆಸಿದ್ದಾನೆ. ಬಳಿಕ ತಾನು ಟೀ ತರುವುದಾಗಿ ಹೇಳಿ ಆತನ ಬ್ಯಾಗ್ ಅನ್ನು ಆಕೆಯ ಪಕ್ಕದಲ್ಲೇ ಇಟ್ಟು ಹೋಗಿ 2 ಕಪ್‌ಗಳಲ್ಲಿ ಟೀ ತಂದಿದ್ದು, ಚೆನ್ನಮ್ಮರಿಗೆ ಕುಡಿಯಲು ತಿಳಿಸಿದ್ದಾನೆ. ಈ ವೇಳೆ, ಆಕೆ ಬೇಡ ಎಂದರೂ ನೀವು ನನ್ನ ತಾಯಿ ಇದ್ದ ಹಾಗೆ ಎಂದು ಹೇಳುವ ಮೂಲಕ ಆಕೆಯ ನಂಬಿಕೆ ಗಳಿಸಿದ್ದು, ಇದಕ್ಕೆ ಮರುಳಾದ ಆಕೆ ಆ ಟೀಯನ್ನು ಕುಡಿದಿದ್ದು, ಆತನಿಗೆ ದಾಳಿಂಬೆ ಹಣ್ಣನ್ನು ಸಹ ನೀಡಿದ್ದಾಳೆ. ಆದರೆ, ಇದಾದ ಕೆಲವೇ ಹೊತ್ತಲ್ಲಿ ಚೆನ್ನಮ್ಮ ಬಸ್‌ನಲ್ಲಿ ನಿದ್ದೆಗೆ ಜಾರಿದ್ದು, ಬಳಿಕ ಬಸ್‌ನಿಂದ ಕೆಳಗಿಳಿದ ನಂತರ ಆಕೆಯ ಕತ್ತಲ್ಲಿ 29 ಗ್ರಾಂ ಚಿನ್ನದ ಸರ ಕಳ್ಳತನವಾಗಿರುವುದು ಆಕೆ–ಯ ಗಮನಕ್ಕೆ ಬಂದಿದೆ. ಇದರಿಂದ ಗಾಬರಿಗೊಂಡ ಆಕೆ ಮಗನಿಗೆ ವಿಚಾರ ತಿಳಿಸಿದ್ದು, ಈ ಸಹಪ್ರಯಾಣಿಕನ ಮೇಲೆ ಅನುಮಾನ ವ್ಯಕ್ತಪಡಿಸಿ ಕೊನೆಗೆ ಕಾರಿನಲ್ಲಿ ಮನೆ ತೆರಳಿದ್ದಾರೆ. ಇದಾದ ಮರುದಿನವೇ ಚಿನ್ನದ ಸರ ಕಳ್ಳತನ ವಾಗಿರುವ ಕುರಿತು ಬ್ಯಾಟರಾಯನಪುರ ಪೊಲೀಸ್ ಠಾಣೆಗೆ ತೆರಳಿ ಆಕೆ ಆ ವ್ಯಕ್ತಿಯ ಮೇಲೆ ಅನುಮಾನ ವ್ಯಕ್ತಪಡಿಸಿ ದೂರು ನೀಡಿದ್ದು, BNS ಕಾಯ್ದೆ 303 ಹಾಗೂ 318 ಅಡಿ ಕಳ್ಳತನ, ವಂಚನೆ ಪ್ರಕರಣ ದಾಖಲಿಸಲಾಗಿದೆ. ಸದ್ಯ ಸಿಸಿಟಿವಿ ದೃಶ್ಯಗಳನ್ನು ಆಧರಿಸಿ ತನಿಖೆ ನಡೆಸಲಾಗುತ್ತಿದೆ ಎಂದು ಪೊಲೀಸರು ತಿಳಿಸಿದ್ದಾರೆ.

# ಮುಖ್ಯ ಎಂಜಿನಿಯರುಗಳು ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಬೇಕು: ಈಶ್ವರ ಖಂಡ್ರೆ

**ಸತ್ಯಮಿಥ್ಯ ಸುದ್ದಿಮೂಲ ಬೆಂಗಳೂರು :**
ಕಳೆದ ಕೆಲವು ದಿನಗಳಿಂದ ನಾಪತ್ತೆಯಾಗಿರುವ ಕೆ.ಆರ್.ಐ.ಡಿ.ಎಲ್. ಗದಗ ಉಪ ವಿಭಾಗದ ಎ.ಇ.ಇ. ಪರ್ವೇಜ್ ಪತ್ತೆಗೆ ಸರ್ಕಾರ ಎಲ್ಲ ಕ್ರಮ ಕೈಗೊಂಡಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ ಖಂಡ್ರೆ ಹೇಳಿದ್ದಾರೆ.



ಪರ್ವೇಜ್ ಅವರ ತಂದೆ ಜಾಫರ್ ಅವರನ್ನು ದೂರವಾಣಿ ಮೂಲಕ ಸಂಪರ್ಕಿಸಿ ಧೈರ್ಯ ಹೇಳಿದ ಅವರು, ಜಿಲ್ಲಾಧಿಕಾರಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಹಾಗೂ ಡಿಜಿಪಿಯುವರೊಂದಿಗೆ ಕೂಡ ತಾವು ಮಾತನಾಡಿದ್ದು, ಪರ್ವೇಜ್ ಹುಡುಕಲು ಎಲ್ಲ ಕ್ರಮ ಕೈಗೊಳ್ಳುವಂತೆ ತಿಳಿಸಿರುವುದಾಗಿ ಹೇಳಿದರು.

ಸರ್ಕಾರದಲ್ಲಿ ಹಣದ ಕೊರತೆ ಇಲ್ಲ. ಪರ್ವೇಜ್ ಹಣ ಪಾವತಿಗೆ ಸಂಬಂಧಿಸಿದಂತೆ ಆತಂಕ ಪಡುವ ಅಗತ್ಯವಿಲ್ಲ, ಪರ್ವೇಜ್ ನಿಮ್ಮನ್ನು ಸಂಪರ್ಕಿಸಿದರೆ, ಯಾವುದೇ ಸಮಸ್ಯೆ ಇದ್ದರೂ ಸರ್ಕಾರ ಅದನ್ನು ಪರಿಹರಿಸುತ್ತದೆ ಎಂದು ತಿಳಿಸಿದೆ ಎಂಬ ಮಾಹಿತಿ ನೀಡಿ. ಮನೆಯವರಿಗೆಲ್ಲಾ ಧೈರ್ಯ ಹೇಳಿ ಎಂದರು. ಈ ಪ್ರಕರಣದ ಬಗ್ಗೆ ತನಿಖೆ ಮಾಡಲೂ ಸೂಚಿಸಲಾಗಿದೆ. ಪರ್ವೇಜ್ ಅವರಿಗೆ ನ್ಯಾಯ ಕೊಡಿಸುತ್ತೇನೆ ಎಂದು ಈಶ್ವರ ಖಂಡ್ರೆ ಜಾಫರ್ ಅವರಿಗೆ ಧೈರ್ಯ ಹೇಳಿದರು. ಈ ಸಂದರ್ಭದಲ್ಲಿ ಕೆ.ಆರ್.ಐ.ಡಿ.ಎಲ್. ವ್ಯವಸ್ಥಾಪಕ ನಿರ್ದೇಶಕ ರಾಜೇಶ್ ಗೌಡ ಮತ್ತಿತರರು ಹಾಜರಿದ್ದರು. ಕೆ.ಆರ್.ಐ.ಡಿ.ಎಲ್. ಗದಗ ಉಪ ವಿಭಾಗದ ಸಹಾಯಕ ಕಾರ್ಯಪಾಲಕ ಅಭಿಯಂತರ ಪರ್ವೇಜ್ ಕೆಲವು ದಿನಗಳಿಂದ ನಾಪತ್ತೆಯಾಗಿರುವ ಹಿನ್ನೆಲೆಯಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ ಖಂಡ್ರೆ ಅವರಿಂದು ಕೆ.ಆರ್.ಐ.ಡಿ.ಎಲ್. ವ್ಯವಸ್ಥಾಪಕ ನಿರ್ದೇಶಕ ರಾಜೇಶ್ ಗೌಡ, ಮುಖ್ಯ ಎಂಜಿನಿಯರ್ ಗಳಾದ ತಿಮ್ಮರಾಜಪ್ಪ, ಶ್ರೀನಿವಾಸ್, ವೇಣುಗೋಪಾಲ್ ಹಾಗೂ ಗದಗದ ಎಂಜಿನಿಯರುಗಳೊಂದಿಗೆ ಸಭೆ ನಡೆಸಿದರು.

ಸತ್ಯ ಮಿಥ್ಯ

SATYA MITHI
Kannada Daily Morning

# ಹಿರಿಯರ ಕನಸು ಯುವ ನಾಯಕತ್ವದ ಕಾಯಕಲ್ಪ!

## 50 ವರ್ಷಗಳ ಸಹಕಾರ ಪಯಣಕ್ಕೆ ಹೊಸ ರೂಪ ನೀಡಿದ ಪ್ರಿಯಾಂಕ್ ಭಟ್ ಪೂಜಾರಿ

## ದೇವಲ ಗಾಣಗಾಪುರದಲ್ಲಿ ಕೃಷಿ ಪತ್ತಿನ ಸಹಕಾರ ಸಂಘದ ನೂತನ ಕಟ್ಟಡ ಲೋಕಾರ್ಪಣೆ

**ಸತ್ಯಮಿಥ್ಯ ಸುದ್ದಿಮೂಲ ಅಫಜಲಪುರ:**
ಕೃಷಿ ಕ್ಷೇತ್ರದಲ್ಲಿ ನಿರಂತರವಾಗಿ ನಷ್ಟ ಅನುಭವಿಸುತ್ತಿರುವ ರೈತರು ಪರ್ಯಾಯ ಉದ್ಯೋಗಗಳತ್ತ ಮುಖ ಮಾಡುತ್ತಿರುವ ಇಂದಿನ ಸಂದರ್ಭದಲ್ಲಿ, ರೈತರ ಬೆನ್ನೆಲುಬಾಗಿ ನಿಲ್ಲಬೇಕಾದ ಸಹಕಾರ ಸಂಘಗಳನ್ನು ಬಲಪಡಿಸುವುದು ಅತ್ಯಂತ ಅಗತ್ಯವಾಗಿದೆ ಎಂದು ಶಾಸಕ ಎಂ.ವೈ. ಪಾಟೀಲ್ ಹೇಳಿದರು.

ತಾಲೂಕಿನ ಪ್ರಸಿದ್ಧ ಕ್ಷೇತ್ರವಾದ ದೇವಲ ಗಾಣಗಾಪುರ ಗ್ರಾಮದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ನವೀಕರಣಗೊಂಡ ನೂತನ ಕಟ್ಟಡದ ಉದ್ಘಾಟನೆ ಹಾಗೂ ಸಂಘದ ಸುವರ್ಣ ಮಹೋತ್ಸವ ಸಮಾರಂಭವನ್ನು ಜ್ಯೋತಿ ಬೆಳಗಿಸುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು.

ಸಂಘದ ಹಳೆಯ ಕಟ್ಟಡ ಶಿಥಿಲಾವಸ್ಥೆಯಲ್ಲಿದ್ದ ಸಂದರ್ಭದಲ್ಲಿ, ಸಂಘದ ಅಧ್ಯಕ್ಷ ಪ್ರಿಯಾಂಕ್ ಭಟ್ ಪೂಜಾರಿ ಅವರು ತಮ್ಮ ಸ್ವಂತ ದುಡಿಮೆಯ 10 ಲಕ್ಷ ಹಣವನ್ನು ವ್ಯಯಿಸಿ ಕಟ್ಟಡವನ್ನು ನವೀಕರಿಸಿರುವುದು ಶ್ಲಾಘನೀಯ ಕಾರ್ಯವಾಗಿದೆ. ಯಾವುದೇ ದೊಡ್ಡ ಸ್ಥಾನಮಾನ ಅಥವಾ ವೈಯಕ್ತಿಕ ಪ್ರತಿಷ್ಠೆಯ ಹಿಂದೆ ಹೋಗದೆ, ಸಾರ್ವಜನಿಕ ಕ್ಷೇತ್ರಕ್ಕೆ ಮಾದರಿಯಾಗುವ ರೀತಿಯಲ್ಲಿ ಅವರು ಕೈಗೊಂಡಿರುವ ಈ ಕಾರ್ಯವು ಯುವ ಪೀಳಿಗೆಗೆ ಹಾಗೂ ಸಹಕಾರ ರಂಗಕ್ಕೆ ಪ್ರೇರಣೆ–ಯಾಗಿದೆ ಎಂದು ಶಾಸಕ ಎಂ.ವೈ. ಪಾಟೀಲ್ ಮೆಚ್ಚುಗೆ ವ್ಯಕ್ತಪಡಿಸಿದರು.

ಸಂಘದ ಆವರಣದಲ್ಲಿ ವಾಣಿಜ್ಯ ಮಳಿಗೆಗಳನ್ನು ನಿರ್ಮಿಸುವ ಮೂಲಕ ಸಂಸ್ಥೆಗೆ ಶಾಶ್ವತ ಆದಾಯದ ಮೂಲ ಕಲ್ಪಿಸಿಕೊಡುವಂತೆ ಅಧ್ಯಕ್ಷ ಪ್ರಿಯಾಂಕ್ ಭಟ್ ಪೂಜಾರಿ ಸಲ್ಲಿಸಿದ ಮನವಿಗೆ ಶಾಸಕರು ಸಕಾರಾತ್ಮಕವಾಗಿ ಸ್ಪಂದಿಸಿದರು. ಕೃಷಿ ಪತ್ತಿನ ಸಹಕಾರ ಸಂಘದ ಅಭಿವೃದ್ಧಿಗೆ ಅಗತ್ಯವಿರುವ ಸರ್ಕಾರಿ ಸೌಲಭ್ಯಗಳನ್ನು ಒದಗಿಸಲು ಆದ್ಯತೆ ನೀಡುವುದಾಗಿ ಭರವಸೆ ನೀಡಿದರು.

ಸಂಘವು 50 ವರ್ಷಗಳನ್ನು ಯಶಸ್ವಿಯಾಗಿ ಪೂರೈಸಿದ ಹಿನ್ನೆಲೆಯಲ್ಲಿ ಆಯೋಜಿಸಿದ್ದ ಸುವರ್ಣ ಮಹೋತ್ಸವ ಕಾರ್ಯಕ್ರಮವನ್ನು ಕೆಎಂಎಫ್ ಮಾಜಿ ನಿರ್ದೇಶಕ ಅರವಿಂದ್ ಗುತ್ತೇದಾರ್ ಅವರು ಜ್ಯೋತಿ ಬೆಳಗಿಸುವ ಮೂಲಕ ಉದ್ಘಾಟಿಸಿದರು.

ನಂತರ ಮಾತನಾಡಿದ ಅವರು, ಅರ್ಧ ಶತಮಾನ ಪೂ–ರೈಸಿ ಸುವರ್ಣ ಮಹೋತ್ಸವ ಆಚರಿಸಿಕೊಳ್ಳುತ್ತಿರುವ ಈ ಸಹಕಾರ ಸಂಸ್ಥೆ ಈ ಭಾಗದ ರೈತರ ಪಾಲಿಗೆ ಕಾಮಧೇನುವಿನಂತಾಗಿದೆ. ರೈತರ ಆರ್ಥಿಕ ಸಬಲೀಕರಣದಲ್ಲಿ ಸಹಕಾರ ಸಂಘಗಳ ಪಾತ್ರ ಮಹತ್ವದ್ದಾಗಿದೆ ಎಂದು ಹೇಳಿದರು.

ಕಾರ್ಯಕ್ರಮದ ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ಜೆಡಿಎಸ್ ಹಿಂದುಳಿದ ವರ್ಗಗಳ ರಾಜ್ಯಾಧ್ಯಕ್ಷ ಶಿವಕುಮಾರ್ ನಾಟೀಕರ್ ಮಾತನಾಡಿ, ರೈತರ ಆರ್ಥಿಕ ಸಬಲೀಕರಣಕ್ಕಾಗಿ ಸ್ಥಾಪನೆಯಾದ ಸಹಕಾರ ಸಂಘಗಳಲ್ಲಿ ರಾಜಕೀಯ ಹಸ್ತಕ್ಷೇಪ ಇರಬಾರದು. ಸಹಕಾರ ಸಂಸ್ಥೆಗಳು ರಾಜಕೀಯ ಮುಕ್ತವಾಗಿ ಕಾರ್ಯನಿರ್ವಹಿಸಿದಾಗ ಮಾತ್ರ ಅರ್ಹ ರೈತರಿಗೆ ಸೌಲಭ್ಯಗಳು ಸಮರ್ಪಕವಾಗಿ ತಲುಪಲು ಸಾಧ್ಯ ಎಂದು ಅಭಿಪ್ರಾಯಪಟ್ಟರು. ಡಿಸಿಸಿ ಬ್ಯಾಂಕ್ ನಿರ್ದೇಶಕ ಅಜಯ್ ಪಾಟೀಲ್ ಮಾತನಾಡಿ, ಸಂಘದ ಸರ್ವಾಂಗೀಣ ಅಭಿವೃದ್ಧಿಗಾಗಿ ಶ್ರಮಿಸುತ್ತಿರುವ ಪ್ರಿಯಾಂಕ್ ಭಟ್ ಪೂಜಾರಿ ಅವರ ಕಾರ್ಯವೈಖರಿ ಹಾಗೂ ಅವರ ಕುಟುಂಬದ ಸೇವಾ ಮನೋಭಾವವನ್ನು ಪ್ರಶಂಸಿಸಿದರು.

ಕಾರ್ಯಕ್ರಮದ ಆರಂಭದಲ್ಲಿ ಶ್ರೀ ದತ್ತ ಮಹಾರಾಜರ ಭಾವಚಿತ್ರ ಹಾಗೂ ಸಹಕಾರ ಪಿತಾಮಹ, ಇಫ್ಕೊ ಸಂಸ್ಥೆಯ ಆದ್ಯ ಪ್ರವರ್ತಕರಾದ ಸಿದ್ದನಗೌಡ ಸಣ್ಣರಾಮನಗೌಡ ಪಾಟೀಲ್ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಲಾಯಿತು.

ದಿವಂಗತ ವಿಠ್ಠಲ್ ಹೇರೂರ ಅವರ ಭಾವಚಿತ್ರಕ್ಕೆ ಚಂದ್ರಕಾಂತ್ ಪೂಜಾರಿ ಪೂಜೆ ಸಲ್ಲಿಸಿದರು. ಸಂಘದ ಅಭಿವೃದ್ಧಿಗೆ ದಾನ ನೀಡಿದ ದಿವಂಗತ ಅಚ್ಯುತ್ ಭಟ್ ಪೂಜಾರಿ ಅವರ ಭಾವಚಿತ್ರಕ್ಕೆ ಅನ್ವರ ತಾಂಬೋಳಿ ಪೂಜೆ ಸಲ್ಲಿಸಿದರು.

ಪ್ರಗತಿಪರ ರೈತ ಚಂದ್ರಮು ಜಗನ್ನಾಥ ಬಿಲ್ವಾಡ್ ಅವರು ತಕ್ಕಡಿ ಧ್ವಜಾರೋಹಣ ನೆರವೇರಿಸಿದರು. ಅಫಜಲಪುರ ತಾಲೂಕು ಪಂಚ ಗ್ಯಾರಂಟಿ ಸಮಿತಿ ಅಧ್ಯಕ್ಷ ಪ್ರಕಾಶ್ ಜಮಾದಾರ್ ಅವರು ಕಂಪ್ಯೂಟರ್ ಉದ್ಘಾಟಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಸಂಘದ ಅಧ್ಯಕ್ಷ ಪ್ರಿಯಾಂಕ್ ಭಟ್ ಪೂಜಾರಿ ಮಾತನಾಡಿ, ಸಂಘದ ಸರ್ವಾಂಗೀಣ ಅಭಿವೃದ್ಧಿ ಹಾಗೂ ರೈತರ ಹಿತರಕ್ಷಣೆಗಾಗಿ ಆಡಳಿತ ಮಂಡಳಿ ಬದ್ಧವಾಗಿ ಕಾರ್ಯನಿರ್ವಹಿಸಲಿದೆ. ಸಂಘದ ನೂತನ ಕಟ್ಟಡದ ನಿರ್ಮಾಣ ಹಾಗೂ ಅಭಿವೃದ್ಧಿ ಕಾರ್ಯಕ್ಕೆ ಸಹಕರಿಸಿದ ಎಲ್ಲರಿಗೂ ಕೃತಜ್ಞತೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ಭಗವಂತರಾವ್ ಹೇರೂರ, ಉದಯಕುಮಾರ್ ಪೂಜಾರಿ, ಲಕ್ಷ್ಮಣ ಹೇರೂರ, ಗುಂಡಪ್ಪ ಹೊಸಮನಿ, ಪ್ರವೀಣ್ ಪೂಜಾರಿ, ಬಲವಂತ ಜಕಾಬ, ಬಸವರಾಜ್ ಹೇರೂರ, ಶ್ರೀಮಂತ ದೇಶಿಂಗಾ, ದೀನನಾಥ್ ಪೂಜಾರಿ ಕೊಳ್ಳೂರು, ಫಿರೋಜ್ ಮನಿಯಾರ್, ರಾಮಣ್ಣ ಕಟಕೆ, ಮಹಾದೇವ ಕೋಳಕೂರ ಸೇರಿದಂತೆ ಗಣ್ಯರನ್ನು ಸನ್ಮಾನಿಸಲಾಯಿತು. ವೇದಿಕೆಯಲ್ಲಿ ಕೆಎಂಎಫ್ ಮಾಜಿ ನಿರ್ದೇಶಕ ಅರವಿಂದ್ ಗುತ್ತೇದಾರ್, ತಾಲೂಕು ಪಂಚ ಗ್ಯಾರಂಟಿ ಸಮಿತಿ ಅಧ್ಯಕ್ಷ ಪ್ರಕಾಶ್ ಜಮಾದಾರ್, ಮುಖಂಡರಾದ ಮಹಾದೇವ ಗುತ್ತೇದಾರ್, ಮಾರುತಿ ಮುರಡನಟ್ಟಿ, ಚಂದ್ರಮಾ ಪೂಜಾರಿ, ದತ್ತು ಕೊಳ್ಳೂರು, ಬಾಬುಗೌಡ ಪಾಟೀಲ್, ಬಸವರಾಜ್ ಮಲ್ಲಿಕಾರ್ಜುನ ಸಾಗರ, ಬಸವರಾಜ್ ಪೂಜಾರಿ, ಸಂಗಣ್ಣ ಗಾರಂಪಳ್ಳಿ, ಅಮ್ಮಾಜಿ ಮಲಗೊಂಡ, ದತ್ತಾತ್ರೇಯ ಮುಡಕಣ, ಜಿತೇಂದ್ರ ಬಂಡಗಾರ್, ಶರಣಪ್ಪ ಮಟ್ಟೂದ್, ಎಲ್ಲಪ್ಪ ಮುಡಕರ್, ರಫೀಕ್ ಇನಾಂದಾರ್, ಚಂದ್ರಕಾಂತ್ ವಗ್ಗಿ, ನಿರ್ಮಲಾ, ಶರಣಮ್ಮ ಜಮಾದಾರ್ ಸೇರಿದಂತೆ ನೂರಾರು ರೈತರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು. ಶಿಕ್ಷಕ ಬಸವರಾಜ ಪುಲಾರಿ ಕಾರ್ಯಕ್ರಮ ನಿರೂಪಿಸಿದರು.




## ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಸ್ಥಾನಕ್ಕೆ ಮತೀನ್ ಪಟೇಲ್ ಹೆಸರು ಪರಿಗಣಿಸಿ: ರಹೀಮ್ ಟೈಗರ್ ಆಗ್ರಹ

**ಸತ್ಯಮಿಥ್ಯ ಸುದ್ದಿಮೂಲ ಅಫಜಲಪೂರ:**
ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಸ್ಥಾನಕ್ಕೆ ದೇವಲ ಗಾಣಗಾಪೂರ ಗ್ರಾಮದ ಮುಖಂಡ ಮತೀನ್ ಪಟೇಲ್ ಅವರನ್ನು ನೇಮಕ ಮಾಡಬೇಕು ಎಂದು ರಹೀಮ್ ಟೈಗರ್ ಆಗ್ರಹಿಸಿದ್ದಾರೆ.





ಪಕ್ಷದ ಸಂಘಟನೆ ಹಾಗೂ ಸ್ಥಳೀಯ ಮಟ್ಟದಲ್ಲಿ ಕಾಂಗ್ರೆಸ್ ಪಕ್ಷವನ್ನು ಬಲಪಡಿಸುವ ನಿಟ್ಟಿನಲ್ಲಿ ಮತೀನ್ ಪಟೇಲ್ ಅವರು ಸಕ್ರಿಯವಾಗಿ ಕಾರ್ಯನಿರ್ವಹಿಸುತ್ತಿದ್ದು, ಪಕ್ಷದ ಕಾರ್ಯಕರ್ತರು ಹಾಗೂ ಮುಖಂಡರೊಂದಿಗೆ ಉತ್ತಮ ಬಾಂಧವ್ಯ ಹೊಂದಿದ್ದಾರೆ. ಹೀಗಾಗಿ ಅವರ ಸೇವೆ ಮತ್ತು ಸಂಘಟನಾ ಸಾಮರ್ಥ್ಯವನ್ನು ಪರಿಗಣಿಸಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಸ್ಥಾನ ನೀಡಬೇಕು ಎಂದು ಅವರು ಒತ್ತಾಯಿಸಿದ್ದಾರೆ.

ದೇವಲ ಗಾಣಗಾಪೂರ ಸೇರಿದಂತೆ ಅಫಜಲಪೂರ ತಾಲೂಕಿನ ವಿವಿಧ ಭಾಗಗಳಲ್ಲಿ ಪಕ್ಷದ ಸಂಘಟನೆಗೆ ಹೆಚ್ಚಿನ ಒತ್ತು ನೀಡುವ ಅಗತ್ಯವಿದೆ. ಯುವಕರು ಹಾಗೂ ಕಾರ್ಯ ಕರ್ತರನ್ನು ಒಗ್ಗೂಡಿಸಿ ಪಕ್ಷವನ್ನು ಮತ್ತಷ್ಟು ಸಂಘಟಿಸುವ ಸಾಮರ್ಥ್ಯ ಮತೀನ್ ಪಟೇಲ್ ಅವರಿಗಿದೆ ಎಂದು ರಹೀಮ್ ಟೈಗರ್ ತಿಳಿಸಿದ್ದಾರೆ. ಈ ಹಿನ್ನೆಲೆಯಲ್ಲಿ ಪಕ್ಷದ ಹಿರಿಯ ನಾಯಕರು ಹಾಗೂ ಸಂಬಂಧಿಸಿದ ಮುಖಂಡರು ಮತೀನ್ ಪಟೇಲ್ ಅವರ ಹೆಸರನ್ನು ಪರಿಗಣಿಸಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಸ್ಥಾನ ನೀಡುವಂತೆ ಅವರು ಮನವಿ ಮಾಡಿದ್ದಾರೆ.

## ಗಾಂಧೀಜಿ ಮತ್ತು ಶಿಕ್ಷಣ ಕುರಿತು ವಿಚಾರ ಮಂಥನ

**ಸತ್ಯಮಿಥ್ಯ ಸುದ್ದಿಮೂಲ ನರೇಗಲ್ಲ :**
ಹಾಲಕೆರೆ ಶ್ರೀ ಅನ್ನದಾನೇಶ್ವರ ಸಂಸ್ಥಾನಮಠದ ಅಕ್ಷರ ಭಾರತ ಪ್ರತಿಷ್ಠಾನ, ಗದಗ ಹಾಗೂ ಶ್ರೀ ಅನ್ನದಾನ ವಿಜಯ ವಿದ್ಯಾ ಪ್ರಸಾರಕ ಸಮಿತಿ, ನರೇಗಲ್ಲ ಇವರ ಸಹಯೋಗದಲ್ಲಿ ಶಿವಾನುಭವಗೋಷ್ಠಿ–77 ಕಾರ್ಯಕ್ರಮ ಸೆ.30ರಂದು ಸಂಜೆ 6.30ಕ್ಕೆ ನರೇಗಲ್ಲದ ಶ್ರೀ ಅನ್ನದಾನೇಶ್ವರ ಶಿವಾನುಭವ ಮಂಟಪದಲ್ಲಿ ನಡೆಯಲಿದೆ. ಪರಮಪೂಜ್ಯ ಜಗದ್ಗುರು ಮುಪ್ಪಿನ ಬಸವಲಿಂಗ ಮಹಾಸ್ವಾಮಿಗಳು ಕಾರ್ಯಕ್ರಮದ ದಿವ್ಯ ಸಾನಿಧ್ಯ ವಹಿಸಲಿದ್ದಾರೆ. ಮುಖ್ಯ ಉಪನ್ಯಾಸಕರಾಗಿ ಎಸ್.ಎ.ವಿ.ವಿ.ಪಿ ಸಮಿತಿಯ ಪ್ರಧಾನ ಕಾರ್ಯದರ್ಶಿ ರವೀಂದ್ರನಾಥ ದೊಡ್ಡಮೇಟಿ ಅವರು 'ಗಾಂಧೀಜಿ ಮತ್ತು ಶಿಕ್ಷಣ' ವಿಷಯ ಕುರಿತು ವಿಚಾರ ಮಂಡಿಸಲಿದ್ದಾರೆ.

ಗಾಂಧೀಜಿಯವರ ಶಿಕ್ಷಣ ಚಿಂತನೆ, ಶಿಕ್ಷಣದ ಉದ್ದೇಶ ಹಾಗೂ ಸಮಾಜ ನಿರ್ಮಾಣದಲ್ಲಿ ಶಿಕ್ಷಣದ ಪಾತ್ರ ಕುರಿತು ಕಾರ್ಯಕ್ರಮದಲ್ಲಿ ವಿಚಾರ ಮಂಥನ ನಡೆಯಲಿದೆ. ಸದ್ಭಕ್ತರು, ಶಿಕ್ಷಕರು, ವಿದ್ಯಾರ್ಥಿಗಳು ಹಾಗೂ ಶಿಕ್ಷಣಾಸಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮದ ಸದುಪಯೋಗ ಪಡೆದುಕೊಳ್ಳುವಂತೆ ಆಯೋಜಕರು ಪ್ರಕಟಣೆಯಲ್ಲಿ ಮನವಿ ಮಾಡಿದ್ದಾರೆ.

## ಬೆಳೆ ಹಾನಿ ಪರಿಹಾರಕ್ಕೆ ಎಫ್ಐಡಿ ಕಡ್ಡಾಯ: ರೈತರಿಗೆ ಕೃಷಿ ಅಧಿಕಾರಿ ಸಲಹೆ

**ಸತ್ಯಮಿಥ್ಯ ಸುದ್ದಿಮೂಲ ಮುದ್ದೇಬಿಹಾಳ:**



ಪ್ರಸಕ್ತ ಸಾಲಿನ ಮುಂಗಾರು ಹಂಗಾಮಿನಲ್ಲಿ ಮಳೆ ಕೊರತೆಯಿಂದ ಸಂಕಷ್ಟಕ್ಕೊಳಗಾಗಿರುವ ರೈತರಿಗೆ ಎನ್‌ಡಿಆರ್‌ಎಫ್ ಹಾಗೂ ಎಸ್‌ಡಿಆರ್‌ಎಫ್ ಅನುದಾನದ ನಿರೀಕ್ಷೆಯೊಂದಿಗೆ ಪ್ರತಿ ಅರ್ಹ ರೈತರಿಗೆ ಸರಕಾರದಿಂದ 2,500 ರೂ. ಇನ್‌ಪುಟ್ ಸಬ್ಸಿಡಿ ನೀಡಲು ಸರ್ಕಾರ ನಿರ್ಧರಿಸಿದೆ.

ವಿಜಯಪುರ ಜಿಲ್ಲೆಯ ಎಲ್ಲಾ ತಾಲೂಕುಗಳನ್ನು ಬರಪೀಡಿತ ಪ್ರದೇಶಗಳೆಂದು ಘೋಷಿಸಲಾಗಿದ್ದು, ಸರಕಾರದ ಮಾರ್ಗಸೂಚಿಯನ್ವಯ ಈ ಪರಿಹಾರ ಸೌಲಭ್ಯವನ್ನು ಎಫ್‌ಐಡಿ ಹೊಂದಿರುವ ಅರ್ಹ ರೈತರಿಗೆ ಮಾತ್ರ ಒದಗಿಸಲಾಗುತ್ತದೆ.

ಢವಳಗಿ ಹೋಬಳಿಯಲ್ಲಿ ಶೇಕಡಾ 80 ರಷ್ಟು ರೈತರು ಮಾತ್ರ ತಮ್ಮ ಜಮೀನಿಗೆ ಎಫ್‌ಐಡಿ ಜೋಡಣೆ ಮಾಡಿಸಿಕೊಂಡಿದ್ದಾರೆ. ಉಳಿದ ರೈತರು ತಕ್ಷಣವೇ ತಮ್ಮ ಜಮೀನನ್ನು ಎಫ್‌ಐಡಿಗೆ ಜೋಡಣೆ ಮಾಡಿಸಿಕೊಳ್ಳಬೇಕು. ಎಫ್‌ಐಡಿ ಮಾಡಿಸದ ರೈತರು ತಮ್ಮ ಪಹಣಿ, ಆಧಾರ್ ಕಾರ್ಡ್ ಹಾಗೂ ಬ್ಯಾಂಕ್ ಪಾಸ್ ಬುಕ್‌ಗಳೊಂದಿಗೆ ರೈತ ಸಂಪರ್ಕ ಕೇಂದ್ರ–ಕ್ಕೆ ಭೇಟಿ ನೀಡಿ ಎಫ್‌ಐಡಿ ಮಾಡಿಸಿಕೊಳ್ಳಬೇಕು. ಈಗಾಗಲೇ ಎಫ್‌ಐಡಿ ಹೊಂದಿರುವ ರೈತರು ತಮ್ಮ ಹೆಸರಿನಲ್ಲಿರುವ ಎಲ್ಲಾ ಸರ್ವೆ ನಂಬರ್‌ಗಳು ಎಫ್‌ಐಡಿಗೆ ಜೋಡಣೆಯಾಗಿರುವುದನ್ನು ಖಚಿತಪಡಿಸಿಕೊಳ್ಳಬೇಕು. ಜೋಡಣೆಯಾಗದ ಸರ್ವೆ ನಂಬರ್‌ಗಳಿದ್ದಲ್ಲಿ, ಢವಳಗಿ ರೈತ ಸಂಪರ್ಕ ಕೇಂದ್ರ ಕಚೇರಿಗೆ ಭೇಟಿ ನೀಡಿ ಅವುಗಳನ್ನು ಕೂಡಲೇ ಜೋಡಿಸಿಕೊಳ್ಳಬೇಕು. ಬರ ಪರಿಹಾರ ಸೌಲಭ್ಯ ಪಡೆಯುವಲ್ಲಿ ಯಾವುದೇ ರೀತಿಯ ವಿಳಂಬ ಉಂಟಾಗದಂತೆ ಹೋಬಳಿಯ ಹಾಗೂ ತಾಲೂಕಿನ ಎಲ್ಲಾ ರೈತರು ಈ ಪ್ರಕ್ರಿಯೆಯನ್ನು ತಕ್ಷಣವೇ ಪೂರ್ಣಗೊಳಿಸಬೇಕು. ಅಷ್ಟೇ ಅಲ್ಲದೆ, ಪಿಎಂ ಕಿಸಾನ್ ಹಣಕ್ಕಾಗಿ ರೈತರು ಕಡ್ಡಾಯವಾಗಿ ಇ–ಕೆವೈಸಿ ಮಾಡಿಸಬೇಕು. ಇದನ್ನು ಸಮೀಪದ ಸಿಎಸ್‌ಸಿ ಮತ್ತು ರೈತ ಸಂಪರ್ಕ ಕೇಂದ್ರಕ್ಕೆ ಭೇಟಿ ನೀಡಿ ಮಾಡಿಸಬಹುದು ಅಥವಾ ಆಂಡ್ರಾಯ್ಡ್ ಮೊಬೈಲ್‌ನಲ್ಲಿ ಅಪ್ಲಿಕೇಶನ್ ಡೌನ್‌ಲೋಡ್ ಮಾಡಿಕೊಂಡು ತಾವೇ ಮಾಡಿಕೊಳ್ಳಬಹುದು ಎಂದು ಢವಳಗಿ ರೈತ ಸಂಪರ್ಕ ಕೇಂದ್ರದ ಕೃಷಿ ಅಧಿಕಾರಿಯಾದ ಗೋವಿಂದರೆಡ್ಡಿ ಮೇದಕಿನಾಳ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಾದಕ ವ್ಯಸನದಿಂದ ದೂರವಿರಿ: ಡಿವೈಎಸ್ಪಿ ಮುರ್ತುಜಾ ಖಾದ್ರಿ

**ಸತ್ಯಮಿಥ್ಯ ಸುದ್ದಿ ಮೂಲ ಶಿರಹಟ್ಟಿ:**
ಮಾದಕ ದ್ರವ್ಯಗಳ ಸೇವನೆಯಿಂದ ಯುವಜನರ ಆರೋಗ್ಯ, ಶಿಕ್ಷಣ ಹಾಗೂ ಭವಿಷ್ಯದ ಮೇಲೆ ದುಷ್ಪರಿಣಾಮ ಬೀರುತ್ತಿದ್ದು, ವಿದ್ಯಾರ್ಥಿಗಳು ಮಾದಕ ವ್ಯಸನದಿಂದ ಸಂಪೂರ್ಣವಾಗಿ ದೂರವಿದ್ದು, ಉತ್ತಮ ಜೀವನಶೈಲಿ ರೂಢಿಸಿಕೊಳ್ಳಬೇಕು ಎಂದು ಡಿವೈಎಸ್ಪಿ ಮುರ್ತುಜಾ ಖಾದ್ರಿ ಹೇಳಿದರು.

ಸ್ಥಳೀಯ ಡಿ.ದೇವರಾಜ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ಬಾಲಕರ ವಸತಿ ನಿಲಯದಲ್ಲಿ ನಡೆದ ಮಾದಕ ದ್ರವ್ಯ ವ್ಯಸನದ ಕುರಿತು ಜಾಗೃತಿ ಕಾರ್ಯಕ್ರಮದಲ್ಲಿ ಮಾತನಾಡಿದರು.

ಮಾದಕ ದ್ರವ್ಯಗಳ ಬಳಕೆ ವ್ಯಕ್ತಿಯ ದೈಹಿಕ ಮತ್ತು ಮಾನಸಿಕ ಆರೋಗ್ಯದ ಮೇಲೆ ಪರಿಣಾಮ ಬೀರುವುದರ ಜೊತೆಗೆ, ಕುಟುಂಬ ಹಾಗೂ ಸಮಾಜದ ಮೇಲೂ ಗಂಭೀರ ಪರಿಣಾಮ ಉಂಟುಮಾಡುತ್ತದೆ. ವಿದ್ಯಾರ್ಥಿಗಳು ದುಶ್ಚಟಗಳಿಗೆ ಬಲಿಯಾಗದೇ ಶಿಕ್ಷಣ, ಕ್ರೀಡೆ ಹಾಗೂ ಸೃಜನಾತ್ಮಕ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡು ತಮ್ಮ ಭವಿಷ್ಯ ರೂಪಿಸಿಕೊಳ್ಳಬೇಕು ಎಂದರು.

ವಿದ್ಯಾರ್ಥಿಗಳು ಯಾವುದೇ ರೀತಿಯ ಮಾದಕ ವಸ್ತುಗಳ ಬಳಕೆ ಅಥವಾ ಅಕ್ರಮ ಚಟುವಟಿಕೆ ಕಂಡುಬಂದಲ್ಲಿ ಸಂಬಂಧಪಟ್ಟ ಅಧಿಕಾರಿಗಳ ಗಮನಕ್ಕೆ ತರಬೇಕು. ಮಾದಕ ವ್ಯಸನ ಮುಕ್ತ ಸಮಾಜ ನಿರ್ಮಾಣದಲ್ಲಿ ಯುವಜನರ ಪಾತ್ರ ಮಹತ್ವದ್ದಾಗಿದೆ ಎಂದು ಹೇಳಿದರು.

ಸೋಮಶೇಕರ ರಾಮಗೇರಿ, ಪುನೀತ್ ಬಾಗೇವಾಡಿ, ಪರಶುರಾಮ ಕಳ್ಳಿಮನಿ ಇದ್ದರು.




## ವಿಬಿ ಜಿ ರಾಮ್ ಜಿ ಯೋಜನೆಯಿಂದ ಸರ್ವಾಂಗೀಣ ಅಭಿವೃದ್ಧಿ

**ಸತ್ಯಮಿಥ್ಯ ಸುದ್ದಿಮೂಲ ಗಜೇಂದ್ರಗಡ:**
ತಾಲೂಕಿನ ಇಟಗಿ ಗ್ರಾಮ ಪಂಚಾಯತಿಯ ಇಟಗಿ ಗ್ರಾಮದಲ್ಲಿ ವಿಬಿ ಜಿ ರಾಮ್ ಜಿ ಯೋಜನೆಯಡಿ ಕೆರೆ ಪುನಶ್ಚೇತನ ಕಾಮಗಾರಿ ಸ್ಥಳಕ್ಕೆ ಮಾನ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಇಂದು ಭೇಟಿ ನೀಡಿ ಪರಿಶೀಲಿಸಿದರು.

ಈ ವೇಳೆ ಕೂಲಿಕಾರರನ್ನು ಉದ್ದೇಶಿಸಿ ಮಾತನಾಡಿದ ಅವರು, ಗ್ರಾಮೀಣ ಪ್ರದೇಶದ ರೈತರು, ಕೂಲಿಕಾರರ ಜೀವನೋಪಾಯ ಚಟುವಟಿಕೆಗಳ ಮೂಲಕ ಆರ್ಥಿಕ ಸದೃಢಕ್ಕಾಗಿ ಜಾರಿಯಾದ ವಿಬಿ ಜಿ ರಾಮ್ ಜಿ ಯೋಜನೆಯಿಂದ ಕೂಲಿಕಾರರ ಸರ್ವಾಂಗೀಣ ಅಭಿವೃದ್ಧಿಯಾಗಲಿದೆ ಎಂದು ಹೇಳಿದರು.

ವಿಬಿ ಜಿ ರಾಮ್ ಜಿ ಯೋಜನೆಯಡಿ ಪ್ರತಿದಿನ ಎರಡು ಬಾರಿ ಹಾಜರಾತಿ ಕಡ್ಡಾಯವಿದೆ. ಅಳತೆಗೆ ತಕ್ಕಂತೆ ವೇತನ ನೀಡಲಾಗುವುದು. ಹೀಗಾಗಿ ಎಲ್ಲರೂ ಸರಿಯಾಗಿ ಕೆಲಸ ಮಾಡಿ ಪೂರ್ಣ ಪ್ರಮಾಣದ ಕೂಲಿ ಪಡೆಯಬೇಕು. ಈ ಯೋಜನೆಯಲ್ಲಿ ಸಮುದಾಯ ಕಾಮಗಾರಿಗಳು ಅಷ್ಟೇ ಅಲ್ಲದೆ ವೈಯಕ್ತಿಕ ಕಾಮಗಾರಿಗಳಿಗೆ ಹೆಚ್ಚಿನ ಆದ್ಯತೆ ನೀಡಲಾಗಿದೆ. ರೈತರು ತಮ್ಮ ಜಮಿನುಗಳಲ್ಲಿ ವೈಯಕ್ತಿಕ ಕಾಮಗಾರಿಗಳನ್ನು ಮಾಡಿಕೊಂಡು ಆರ್ಥಿಕವಾಗಿ ಸದೃಡರಾಗಬೇಕೆಂದು ತಿಳಿಸಿದರು.



ವಿಬಿ ಜಿ ರಾಮ್ ಜಿ ಯೋಜನೆಯಡಿ 375 ಕಾಮಗಾರಿಗಳನ್ನು ತೆಗೆದುಕೊಳ್ಳಲಾಗಿದೆ. ಜುಲೈ 1 ರಿಂದ ಪ್ರತಿಯೊಬ್ಬ ಕೂಲಿಕಾರರಿಗೂ 382 ರೂಪಾಯಿ ಕೂಲಿಮೊತ್ತ ಹಾಗೂ 125 ದಿನಗಳ ಕೆಲಸ ಸಿಗಲಿದೆ. ಇದರ ಸದುಪಯೋಗ ಎಲ್ಲರೂ ಪಡೆದುಕೊಳ್ಳಬೇಕು. ಗ್ರಾಪಂಗಳಲ್ಲಿ ನಿರಂತರ ಕೆಲಸ ನೀಡಲಾಗುವುದು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಪಿಡಿಒ ಮಹಾಂತೇಶ ಬಾಳಿಕಾಯಿ, ಎಸ್.ಡಿಎಎ ಪರಶುರಾಮ್ ಮ್ಯಾಗಳಮನಿ, ಬಿಎಫ್.ಟಿ ಜ್ಯೋತಿ ವಡ್ಡರ, ಜಿಕೆಎಂ ಹೇಮಲತಾ ಜಡದೇಲಿ, ಕಾರ್ತಿಕ ಪೂಜಾರ, ಗ್ರಾಮ ಪಂಚಾಯತಿ ಸಿಬ್ಬಂದಿಗಳು, ಕಾಯಕ ಬಂಧುಗಳು, ಕೂಲಿಕಾರರು ಹಾಜರಿದ್ದರು.



**ಸಪ್ಟೆಂಬರ್ 27 ರವಿವಾರದಂದು ವಿಶ್ವ ಔಷದ ದಿನಾಚರಣೆಯ ಅಂಗವಾಗಿ ಮುದ್ದೇಬಿಹಾಳ ತಾಲ್ಲೂಕು ಸಂಘದ ವತಿಯಿಂದ ಮುದ್ದೇಬಿಹಾಳ ತಾಲ್ಲೂಕಿನ ಅತ್ಯುತ್ತಮ ವೈದ್ಯರೆಂದು ಡಾ.ಎಸ್ ಬಿ ವಡವಡಗಿ ಎಂಬ ಹಿರಿಯ ವೈದ್ಯರನ್ನು ತಾಳಿಕೋಟಿಯ ಖಾಸ್ಗತೇಶ್ವರ ಮಠದ ಶ್ರೀಗಳಾದ ಶ್ರೀ ಸಿದ್ಧಲಿಂಗ ದೇವರು ಮತ್ತು ಗಣ್ಯರ ಸಮ್ಮುಖದಲ್ಲಿ ಪ್ರಶಸ್ತಿ ನೀಡಿ ಸನ್ಮಾನಿಸಿ ಗೌರವಿಸಲಾಯಿತು.**

# ಪತ್ರಿಕಾ ಭವನಕ್ಕೆ ಹಳೆಯ ನಿವೇಶನ ನೀಡುವಂತೆ ಪುರಸಭೆಗೆ ಮನವಿ

**ಸತ್ಯಮಿಥ್ಯ ಸುದ್ದಿಮೂಲ ಮುಗಳಖೋಡ:** ಪಟ್ಟಣದಲ್ಲಿ ಪತ್ರಿಕಾ ಭವನ ನಿರ್ಮಿ ಸಿಲು ಕೆವಿಜಿ ಬ್ಯಾಂಕಿನ ಹಳೆಯ ಕಟ್ಟಡವನ್ನು ಪತ್ರಕರ್ತರ ಸಂಘಕ್ಕೆ ನೀಡುವಂತೆ ಮುಗಳಖೋಡ ಪುರಸಭೆ ಕಚೇರಿ ವ್ಯವಸ್ಥಾಪಕ ಬಾಬಾಸಾಹೇಬ ಚಿನಗುಂಡಿ ಅವರಿಗೆ ಕಾರ್ಯನಿರತ ಪತ್ರಕರ್ತರ ಸಂಘ ದ ಅಧ್ಯಕ್ಷ ಚೆನ್ನವೀರಯ್ಯಾ ಹಿರೇಮಠ ಮನವಿ ಸಲ್ಲಿಸಿದರು .

ಪಟ್ಟಣ ಪತ್ರಕರ್ತರ ಸಂಘದ ಪ್ರಧಾನ ಕಾರ್ಯದರ್ಶಿ ಸಂತೋಷ ಮುಗಳಿ ಮನವಿ ಪತ್ರವನ್ನು ಓದಿ , ಸುಮಾರು 30 ವರ್ಷಗಳ ಕಾಲ ಗ್ರಾಮೀಣ ಭಾಗದಲ್ಲಿ ಪ್ರಾಮಾಣಿಕತೆ ಹಾಗೂ ಕ್ರಿಯಾಶೀಲತೆಯಿಂದ ಸುದ್ದಿಯನ್ನು ಮಾಡುತ್ತಾ ಬಂದಿರುವ ಪತ್ರಕರ್ತರಿಗೆ ಪುರಸಭೆ ವ್ಯಾಪ್ತಿಗೆ ಬರುವ ಖಾಲಿ ಇರುವ ಹಳೆಯ ಕೆವಿಜಿ ಬ್ಯಾಂಕಿನ ಕಟ್ಟಡವನ್ನು ಪತ್ರಕರ್ತರ ಭವನ ನಿರ್ಮಿಲು ಕಟ್ಟಡವಿದ್ದ ನಿವೇಶನ ವನ್ನು ನೀಡಬೇಕು. ಈ ವಿಷಯವನ್ನು ನಾಳೆ ಮಂಗಳವಾರ ನಡೆಯುವ ಪುರಸಭೆ ಸಾಮಾನ್ಯ ಸಭೆಯಲ್ಲಿ ಚರ್ಚಿಸುವಂತೆ ಮನವಿ ಮಾಡಿಕೊಂಡರು.

ಈ ಸಂದರ್ಭದಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಮುಗಳಖೋಡ ಘಟಕದ ಅಧ್ಯಕ್ಷರಾದ ಚನ್ನವೀರಯ್ಯಾ ಹಿರೇಮಠ, ಉಪಾಧ್ಯಕ್ಷ ಅಜಯ ತೇರದಾಳ, ಪ್ರಧಾನ ಕಾರ್ಯದರ್ಶಿ ಸಂತೋಷ ಮುಗಳಿ,ರಾಯಬಾಗ ತಾಲೂಕಾ ಕಾ.ನಿ.ಪ ಉಪಾಧ್ಯಕ್ಷಹಾಗೂಹಿರಿಯಪತ್ರಕರ್ತಶ್ರೀಮಂತ ಘಟನಟ್ಟಿ, ಖಜಾಂಚಿ ಸಂಗಮೇಶ ಹಿರೇಮಠ, ಪ್ರಕಾಶ ಕಂಬಾರ, ಅಭಿಷೇಕ ಘಟನಟ್ಟಿ, ಭರಮು ತೇಲಿ ಪುರಸಭೆ ಸಿಬ್ಬಂದಿಯವರಾದ ಮಹೇಶ ಚೌಗಲಾ, ಕೆಂಚಪ್ಪ ಹಳಿಂಗಳಿ, ಸೈಸಾಬ ನದಾಫ ಇದ್ದರು.



# ಬಸವರಾಜ ತೋಟಗಿಗೆ ರಾಜ್ಯ ಮಟ್ಟದ ಪ್ರಶಸ್ತಿ

**ಸತ್ಯಮಿಥ್ಯ ಸುದ್ದಿ ಮೂಲ ಬೆಟಗೇರಿ:** ಬೆಂಗಳೂರು ಡಾ.ಭಾರತಿ ಅಕಾಡೆಮಿ ಕಲಾ ಟ್ರಸ್ಟ್ ವತಿಯಿಂದ ನೀಡುವ ಪ್ರಸಕ್ತ ಸಾಲಿನ ರಾಜ್ಯ ಮಟ್ಟದ ವಿಶಾಲ ಕರ್ನಾಟಕ ರತ್ನ ಪ್ರಶಸ್ತಿಯನ್ನು ಬೆಳಗಾವಿ ಜಿಲ್ಲೆ ಗೋಕಾಕ ತಾಲೂಕಿನ ಬೆಟಗೇರಿ ಗ್ರಾಮದಪ್ರಖ್ಯಾತಭಜನಾಕಲಾವಿದಬಸವರಾಜ ಯಲ್ಲಪ್ಪ ತೋಟಗಿ ಅವರಿಗೆ ಬೆಂಗಳೂರಿನ ಚಾಮರಾಜಪೇಟೆ ಕನ್ನಡ ಸಾಹಿತ್ಯ ಪರಿಷತ್ತು ಅಕ್ಕಮಹಾದೇವಿ ಸಭಾಂಗಣದಲ್ಲಿ ಇತ್ತೀಚೆಗೆ ನೀಡಿ ಗೌರವಿಸಿದ್ದಾರೆ.

ರಂಗಭೂಮಿ, ಚಲನಚಿತ್ರ ಹಾಗೂ ಕಿರುತೆರೆ ಕಲಾವಿದೆ, ಬೆಂಗಳೂರು ಡಾ.ಭಾರತಿ ಅಕಾಡೆಮಿ ಕಲಾ ಟ್ರಸ್ಟ್ ಅಧ್ಯಕ್ಷೆ ಡಾ. ಭಾರತಿ ಬೆಂಗಳೂರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಬೆಂಗಳೂರು ಸಾಹಿತಿ, ನಟ, ಸಮಾಜ ಸೇವಕ ಡಾ. ಚಿಕ್ಕಹೆಜ್ಜಾಜಿ ಮಹದೇವ ಉದ್ಘಾಟನೆ ನೆರವೇರಿಸಿದರು. ಸಾಂಸ್ಕೃತಿಕ ಕಾರ್ಯಕ್ರಮ ನಡೆದ ಬಳಿಕ ವಿವಿಧ ವಲಯದ ಸಾಧಕರಿಗೆ ವಿವಿಧ ಪ್ರಶಸ್ತಿಗಳನ್ನು ಈ ವೇಳೆ ವಿತರಿಸಿದರು.

ಚಲನಚಿತ್ರ ನಟ, ನಿರ್ದೇಶಕ, ನಿರ್ಮಾಪಕ ಸ್ಮೈಲ್ ಶಿವು, ಹಿರಿತೆರೆ ಮತ್ತು ಕಿರುತೆರೆ ಕಲಾವಿದೆ ಮಂಜುಳಾ ಹುಬ್ಬಳ್ಳಿ, ಅಕ್ಕಿಸಾಗರದ ಕಲಾವಿದ ಶಂಕರ ತಡಸಿ, ಬಗರನಾಳದ ಭಜನಾ ಕಲಾವಿದ ರಾಮಯ್ಯ ಮಠದ, ದಾಸನಾಳದ ಖ್ಯಾತ ಹಾರ್ಮೋನಿಯಂಮಾಸ್ತರಈರಪ್ಪದಾನನ್ನವರ ಸೇರಿದಂತೆ ಬೆಂಗಳೂರು ಡಾ.ಭಾರತಿ ಅಕಾಡೆಮಿ ಕಲಾ ಟ್ರಸ್ ಪದಾಧಿಕಾರಿಗಳು, ಸದಸ್ಯರು, ಕಿರುತೆರೆ ಗಣ್ಯರು, ಹಾಗೂ ವಿವಿಧ ವಲಯದ ಕಲಾವಿದರು, ನಟರು, ಮತ್ತೀತರರು ಇದ್ದರು.




# ಪಾರಂಪರಿಕ ನಿಯಮ ಪಾಲನೆಯೊಂದಿಗೆ ಸುಸ್ಥಿರ ಪ್ರವಾಸೋದ್ಯಮ ಅಭಿವೃದ್ಧಿಪಡಿಸಬೇಕಿದೆ: ಜಿಲ್ಲಾಧಿಕಾರಿ ಡಾ. ಸುರೇಶ್ ಬಿ. ಇಟ್ನಾಳ್

## ಆನೆಗೊಂದಿಯಲ್ಲಿ ಜಿಲ್ಲಾ ಮಟ್ಟದ ವಿಶ್ವ ಪ್ರವಾಸೋದ್ಯಮ ದಿನಾಚರಣೆ



**ಸತ್ಯಮಿಥ್ಯ ಸುದ್ದಿಮೂಲ ಕೊಪ್ಪಳ :** ಕೊಪ್ಪಳಜಿಲ್ಲೆಯಲ್ಲಿಪ್ರವಾಸೋದ್ಯಮದಬೆಳವಣಿಗೆಗೆವಿಪುಲ ಅವಕಾಶಗಳಿದ್ದು, ಪಾರಂಪರಿಕ ನಿಯಮಗಳು ಹಾಗೂ ಯುನೆಸ್ಕೋ ಮಾರ್ಗಸೂಚಿಗಳನ್ನು ಪಾಲಿಸಿಕೊಂಡು ಸುಸ್ಥಿರ ಪ್ರವಾಸೋದ್ಯಮವನ್ನು ಅಭಿವೃದ್ಧಿಪಡಿಸಬೇಕಾಗಿದೆ ಎಂದು ಕೊಪ್ಪಳ ಜಿಲ್ಲಾಧಿಕಾರಿಗಳಾದ ಡಾ. ಸುರೇಶ ಬಿ. ಇಟ್ನಾಳ್ ಅವರು ಅಭಿಪ್ರಾಯಪಟ್ಟರು.

ಕೊಪ್ಪಳ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಗಂಗಾವತಿ ತಾಲೂಕು ಆಡಳಿತ, ತಾಲ್ಲೂಕು ಪಂಚಾಯತ್, ಆನೆಗೊಂದಿ ಗ್ರಾಮ ಪಂಚಾಯತ್ ಹಾಗೂ ವಿವಿಧ ಸಂಘ-ಸಂಸ್ಥೆಗಳ ಸಂಯುಕ್ತಾಶ್ರಯದಲ್ಲಿ ಮಂಗಳವಾರ (ಸೆಪ್ಟೆಂಬರ್ 29ರಂದು) ಆನೆಗೊಂದಿಯ ಗಗನ್ ಮಹಲ್ ಮುಂಭಾಗದಲ್ಲಿ ಆಯೋಜಿಸಲಾಗಿದ್ದ ವಿಶ್ವ ಪ್ರವಾಸೋದ್ಯಮ ದಿನಾಚರಣೆಯ ಜಿಲ್ಲಾ ಮಟ್ಟದ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಆನೆಗೊಂದಿ ಪಕ್ಕದಲ್ಲಿರುವ ಹಂಪಿ ವಿಶ್ವ ಪಾರಂಪರಿಕ ತಾಣವಾಗಿರುವುದರಿಂದ, ನಿಯಮಾನುಸಾರ 'ಹೆರಿಟೇಜ್ ಇಂಪ್ಯಾಕ್ಟ್ ಅಸೆಸ್‌ಮೆಂಟ್' ನಡೆಸಿ ಪರಿಸರ ಹಾಗೂ ಇತಿಹಾಸಕ್ಕೆ ಧಕ್ಕೆಯಾಗದಂತೆ ಅಭಿವೃದ್ಧಿ ಕಾರ್ಯಗಳನ್ನು ಕೈಗೆತ್ತಿಕೊಳ್ಳುವುದು ಅತ್ಯಗತ್ಯವಾಗಿದೆ. ನಮ್ಮ ಜಿಲ್ಲೆಯಲ್ಲಿ ಪ್ರವಾಸೋದ್ಯಮಕ್ಕೆ ಪೂರಕವಾಗಿ ಹೋಮ್‌ಸ್ಟೇ ನೀತಿಯಡಿ ಅನುಮೋದನೆ ಪ್ರಕ್ರಿಯೆ, ಪ್ರವಾಸಿ ಸರ್ಕಿಟ್ ರಚನೆ, ಸೈಕ್ಲಿಂಗ್ ಪ್ರೋತ್ಸಾಹ, 'ರೆಂಟ್ ಎ ಬೈಕ್' ಸೇವೆ, ಶೌಚಾಲಯ ಸಂಕೀರ್ಣಗಳು ಹಾಗೂ ಮಾಹಿತಿ ಫಲಕಗಳನ್ನು ಅಳವಡಿಸಲು ಜಿಲ್ಲಾಡಳಿತ ಕ್ರಮ ವಹಿಸುತ್ತಿದೆ ಎಂದರು.

ಸ್ವಚ್ಛತೆಗೆ ನಾಗರಿಕ ಪ್ರಜ್ಞೆ ಮುಖ್ಯವಾಗಿದ್ದು, ಕೇವಲ ಸರ್ಕಾರಿ ಆದೇಶ ಮತ್ತು ನಿಯಮಗಳಿಂದ ಮಾತ್ರ ಪರಿಸರ ಉಳಿಸಲು ಸಾಧ್ಯವಿಲ್ಲ. ಪ್ಲಾಸ್ಟಿಕ್ ಮುಕ್ತ ವಾತಾವರಣ, ತ್ಯಾಜ್ಯ ನಿರ್ವಹಣೆ ಹಾಗೂ ಪ್ರವಾಸಿ ತಾಣಗಳ ಸ್ವಚ್ಛತೆ ಕಾಪಾಡುವಲ್ಲಿ ಸ್ಥಳೀಯ ಗ್ರಾಮ ಪಂಚಾಯತಿಗಳು, ದೇವಸ್ಥಾನಗಳ ಆಡಳಿತ ಮಂಡಳಿಗಳು ಮತ್ತು ನಾಗರಿಕರ ಸಕ್ರಿಯ ಸಹಭಾಗಿತ್ವ ಅತ್ಯಂತ ಮಹತ್ವದ್ದಾಗಿದೆ ಎಂದು ಅವರು ಹೇಳಿದರು.

ಅಪರ ಜಿಲ್ಲಾಧಿಕಾರಿಗಳಾದ ಸಿದ್ರಾಮೇಶ್ವರ ಅವರು ಪ್ರಾಸ್ತಾವಿಕವಾಗಿ ಮಾತನಾಡಿ, ಕಳೆದ ಬಾರಿ ಪ್ಲಾಗ್ ರನ್ ಮೂಲಕ ಕಾರ್ಯಕ್ರಮ ಆಚರಿಸಲಾಗಿತ್ತು. ಈ ಬಾರಿ ಭಿನ್ನವಾಗಿ ಅಂಜನಾದ್ರಿ ಸುತ್ತಮುತ್ತ ಸೈಕ್ಲಿಂಗ್ ಜಾಥಾ ಹಮ್ಮಿಕೊಳ್ಳುವ ಮೂಲಕ ಪ್ರವಾಸೋದ್ಯಮ ದಿನಾಚರಣೆಗೆ ಚಾಲನೆ ನೀಡಲಾಯಿತು. ಈ ಬಾರಿಯ ಪರಿಕಲ್ಪನೆಯಂತೆ ಪ್ರವಾಸೋದ್ಯಮದಲ್ಲಿ ಡಿಜಿಟಲ್ ಮಾಧ್ಯಮ ಹಾಗೂ ಕೃತಕ ಬುದ್ಧಿಮತ್ತೆಯ (ಎಐ) ಬಳಕೆ ಹೆಚ್ಚಾಗಬೇಕಿದೆ. ಸಾಮಾಜಿಕ ಮಾಧ್ಯಮ ಮತ್ತು ಡಿಜಿಟಲ್ ಪರಿಕರಗಳ ಮೂಲಕ ಪ್ರವಾಸಿ ತಾಣಗಳನ್ನು ಪ್ರಚಾರ ಮಾಡುವುದು ಇಂದಿನ ತುರ್ತು ಅಗತ್ಯವಾಗಿದೆ. ಜಿಲ್ಲಾಧಿಕಾರಿಗಳ ಮಾರ್ಗದರ್ಶನದಲ್ಲಿ, ಕೊಪ್ಪಳ ಪ್ರವಾಸೋದ್ಯಮದ ಕುರಿತು ಉತ್ತಮ ಡಿಜಿಟಲ್ ಕಂಟೆಂಟ್ ರಚಿಸಿದ ಮೂವರು ಕಂಟೆಂಟ್ ಕ್ರಿಯೇಟರ್ಸ್‌ಗೆ ಪ್ರೋತ್ಸಾಹನೀಡುವಮೂಲಕಇತರರಿಗೂಪ್ರೇರಣೆನೀಡುವ ಹೊಸ ಪ್ರಯೋಗಕ್ಕೆ ಚಾಲನೆ ನೀಡಲಾಗಿದೆ. ಡಿಜಿಟಲ್ ತಂತ್ರಜ್ಞಾನ ಹಾಗೂ ಕೃತಕ ಬುದ್ಧಿಮತ್ತೆ ಸಾಧನಗಳ ಮೂಲಕ ಕೊಪ್ಪಳ ಜಿಲ್ಲೆಯ ಪ್ರವಾಸೋದ್ಯಮವನ್ನು ಜಾಗತಿಕ ಮಟ್ಟಕ್ಕೆ ಕೊಂಡೊಯ್ಯುವ ಅಗತ್ಯವಿದೆ ಎಂದರು.

ಕಾರ್ಯಕ್ರಮದ ಯಶಸ್ಸಿಗೆ ಶ್ರಮಿಸಿದ ಪ್ರವಾಸೋದ್ಯಮ ಇಲಾಖೆಯ ಅಧಿಕಾರಿಗಳು, ಎನ್‌ಸಿಸಿ, ಕೆವ್ಯೆಟಿಸಿ ತಂಡ, ಗೋ ಗ್ರೀನ್, ಚರಣ ಬಳಗ, ಪರಿಸರ ಸೇವಾ ಟ್ರಸ್ಟ್ ಗಂಗಾವತಿ, ಎಕ್ಸ್ಪೋರ್ ಕಿಷ್ಕಿಂದಾ, ಲೀವ್ ವಿತ್ ಹ್ಯುಮ್ಯಾನಿಟಿ ಸೇರಿದಂತೆ ವಿವಿಧ ಸಂಘಟನೆಗಳು ಹಾಗೂ ಗ್ರಾಮಸ್ಥರಿಗೆ ಜಿಲ್ಲಾಡಳಿತದ ಪರವಾಗಿ ಕೃತಜ್ಞತೆ ಸಲ್ಲಿಸುತ್ತೇನೆ ಎಂದು ಹೇಳಿದರು.

ಕಾರ್ಯಕ್ರಮದ ಕುರಿತು ರತ್ನಶ್ರೀ, ಡಾ. ಶಿವಕುಮಾರ ಹಾಗೂ ಮಂಜುನಾಥ ಗುಡ್ಲಾನೂರು ಅವರು ಮಾತನಾಡಿದರು.

**ಅಭಿನಂದನಾ ಪ್ರಮಾಣ ಪತ್ರ ವಿತರಣೆ:** ಕಾರ್ಯಕ್ರಮದ ಅಂಗವಾಗಿ ಜಿಲ್ಲಾ ಪ್ರವಾಸೋದ್ಯಮ ಇಲಾಖೆಯಿಂದ ಪ್ರವಾಸೋದ್ಯಮ ಕ್ಷೇತ್ರದಲ್ಲಿ ಡಿಜಿಟಲ್ ನಾವೀನ್ಯತೆ, ಕೃತಕ ಬುದ್ಧಿಮತ್ತೆ (ಎಐ) ಅಳವಡಿಕೆ ಹಾಗೂ ಸುಸ್ಥಿರ ಪ್ರವಾಸೋದ್ಯಮಕ್ಕೆ ಉತ್ತೇಜನ ನೀಡುವ ಧ್ಯೇಯದೊಂದಿಗೆ ಆಯೋಜಿಸಲಾಗಿದ್ದ ಕಂಟೆಂಟ್ ಕ್ರಿಯೇಷನ್ ವಿಶೇಷ ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಹಾಗೂ ಪ್ರವಾಸೋದ್ಯಮ ಅಭಿವೃದ್ಧಿಗಾಗಿ ವಿವಿಧ ಸಂಘ ಸಂಸ್ಥೆಗಳಿಗೆ ಅಭಿನಂದನಾ ಪ್ರಮಾಣ ಪತ್ರವನ್ನು ವಿತರಿಸಲಾಯಿತು.

ಈ ಸಂದರ್ಭದಲ್ಲಿ ಕೊಪ್ಪಳ ಸಹಾಯಕ ಆಯುಕ್ತರಾದ ಮಹೇಬೂಬ್ ಜೀಲಾನ್ ಖುರೇಶಿ, ಆನೆಗೊಂದಿ ರಾಜವಂಶಸ್ಥರಾದ ಶ್ರೀಕೃಷ್ಣದೇವರಾಯ, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕರಾದ ಅಜ್ಜಪ್ಪ ಸೋಗಲದ, ಗಂಗಾವತಿ ತಹಶಿಲ್ದಾರರಾದ ಯು. ವಸಂತ ಕುಮಾರಿ, ತಾ.ಪಂ ಇಓ ರಾಮರೆಡ್ಡಿ, ಪ್ರವಾಸೋದ್ಯಮ ಇಲಾಖೆ ಸಹಾಯಕ ನಿರ್ದೇಶಕರಾದ ವಿಠ್ಠಲ್ ಜಾಬಗೌಡರ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕರಾದ ಕರ್ಣಕುಮಾರ ಸೇರಿದಂತೆ ಲಿವ್ ವಿತ್ ಹ್ಯುಮಾನಿಟಿ ಮತ್ತು ಕಿಷ್ಕಂದ ಯುವ ಚಾರಣ ಬಳಗ, ಗಂಗಾವತಿಯ ಚಾರಣ ಬಳಗ, ಗೋಗ್ರೀನ ಹಾಗೂ ಪರೀಸರ ಸೇವಾ ಟ್ರಸ್ಟ್ ಮತ್ತು ಎಕ್ಸಪ್ಲೂರ್ ಸೇವಾ ಟ್ರಸ್ಟ್ ಕಿಷ್ಕಿಂದ ಅಂಜನಹಳ್ಳಿ ತಂಡ ಹಾಗೂ ಇತರೆ ಸಂಸ್ಥೆಗಳ ಪದಾಧಿಕಾರಿಗಳು, ವಿವಿಧ ಶಾಲಾ ಕಾಲೇಜುಗಳ ವಿದ್ಯಾರ್ಥಿಗಳು, ಶಿಕ್ಷಕರು, ಪ್ರವಾಸೋದ್ಯಮ ಇಲಾಖೆಯ ಸಿಬ್ಬಂದಿ, ಪ್ರವಾಸಿ ಮಿತ್ರರು, ಪ್ರವಾಸಿ ಮಾರ್ಗದರ್ಶಿಗಳು, ಪ್ರವಾಸಿಗರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

**ಜಿಲ್ಲೆಯ ಐತಿಹಾಸಿಕ ತಾಣಗಳ ಮಹತ್ವ, ಪರಿಸರಸ್ನೇಹಿ ಪ್ರವಾಸೋದ್ಯಮದ ಜಾಗೃತಿಗೆ ಸೈಕ್ಲಿಂಗ್ ಜಾಥಾ:** ವಿಶ್ವ ಪ್ರವಾಸೋದ್ಯಮ ದಿನಾಚರಣೆಯ ಅಂಗವಾಗಿ ಐತಿಹಾಸಿಕ ಅಂಜನಾದ್ರಿ ಬೆಟ್ಟದಿಂದ ಆನೆಗೊಂದಿಯ ಗಗನ್ ಮಹಲ್‌ವರೆಗೆ ಆಯೋಜಿಸಲಾಗಿದ್ದ ವಿಶೇಷ ಸೈಕ್ಲಿಂಗ್ ಜಾಥಾ ಜನರ ಗಮನ ಸೆಳೆಯಿತು. ಜಿಲ್ಲಾಧಿಕಾರಿಗಳು, ಅಪರ ಜಿಲ್ಲಾಧಿಕಾರಿಗಳು, ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ನೂರಾರು ಸೈಕ್ಲಿಂಗ್ ಪ್ರಿಯರು ಬೆಟ್ಟದ ತಪ್ಪಲಿನಿಂದ ಗಗನ್ ಮಹಲ್‌ವರೆಗೆ ಸೈಕಲ್ ತುಳಿಯುವ ಮೂಲಕ ಐತಿಹಾಸಿಕ ತಾಣಗಳ ಮಹತ್ವ ಮತ್ತು ಪರಿಸರಸ್ನೇಹಿ ಪ್ರವಾಸೋದ್ಯಮದ ಕುರಿತು ಜಾಗೃತಿ ಮೂಡಿಸಿದರು.

# ಕೃಷಿ ಮೇಳದಲ್ಲಿ ದೇಸಿ ತಳಿ ಸಂರಕ್ಷಕ ಮಲ್ಲಯ್ಯ ಗುರುಬಸಪ್ಪನಮಠಗೆ ಸನ್ಮಾನ

**ಸತ್ಯಮಿಥ್ಯ ಸುದ್ದಿಮೂಲ ಗದಗ :** ರಾಜ್ಯ ಸರ್ಕಾರವು ಕೃಷಿ ಇಲಾಖೆಯ ಮುಖಾಂತರ 2024–25 ರಿಂದ ದೇಸಿ ತಳಿಗಳ ಸಂರಕ್ಷಣೆ ಮತ್ತು ಉತ್ತೇಜನ ಕಾರ್ಯಕ್ರಮವನ್ನು ಆಯಾ ಸ್ಥಳೀಯ ಪ್ರದೇಶಕ್ಕೆ ಸೂಕ್ತವಾದ ದೇಸಿ ತಳಿಗಳನ್ನು ಗುರುತಿಸಿ, ಕಣ್ಮರೆಯಾಗುತ್ತಿರುವ ದೇಸಿ ತಳಿಗಳನ್ನು ಸಂರಕ್ಷಣೆ ಮಾಡುವ ಹಾಗೂ ಅಭಿವೃದ್ಧಿ ಪಡಿಸಿ ಬಿಡುಗಡೆ ಮಾಡುವ ಉದ್ದೇಶದಿಂದ ಜಾರಿಗೊಳಿಸಲಾಗಿದ್ದು, ಗದಗ ಜಿಲ್ಲೆಯಲ್ಲಿ ಯಶಸ್ವಿಯಾಗಿ ಅನುಷ್ಠಾನಗೊಂಡಿರುತ್ತದೆ. ರೈತರ ಸಂಪ್ರದಾಯಿಕ, ಪರಂಪರೆ, ಜಾನಪದ ಪ್ರಭೇದಗಳು ಎಂದು ಕರೆಯಲ್ಪಡುವ ದೇಸಿ ತಳಿಗಳು ಸ್ಥಳೀಯ/ಸಾಂಪ್ರದಾಯಿಕ ಕೃಷಿ ಪದ್ಧತಿಯಿಂದ ಅಭಿವೃದ್ಧಿ ಪಡಿಸಿದ ತಳಿಗಳಾಗಿರುತ್ತವೆ. ಇವುಗಳು ವಿಶಿಷ್ಟ ಗುಣಲಕ್ಷಣಗಳಾದ ಋತುಮಾನಕ್ಕೆ ಹೊಂದಿಕೊಂಡು ಬೆಳೆಯುವ, ಮಣ್ಣಿನಿಂದ ಕಡಿಮೆ ಪೋಷಕಾಂಶವನ್ನು ಪಡೆಯುವ, ರೋಗ ನಿರೋಧಕ ಮತ್ತು ಬರ ನಿರೋಧಕ ಶಕ್ತಿ ಹೊಂದಿರುವ, ಕಡಿಮೆ ಕೀಟ ಭಾದೆಯೊಂದಿಗೆ ಹೆಚ್ಚು ಇಳುವರಿ ನೀಡುವ ತಳಿಗಳಾಗಿದ್ದು, ಅಧಿಕ ನಾರು ಅಂಶ, ಔಷಧೀಯ ಅಂಶ ಹೊಂದಿದ್ದು ಪೋಷಕಾಂಶಗಳ ಆಗರವಾಗಿವೆ.

ಆಯಾ ಸ್ಥಳೀಯ ಪ್ರದೇಶಕ್ಕೆ ಸೂಕ್ತವಾದ ಕಾರಣ ಕೆಲವೇ ರೈತರು ದೇಸಿತಳಿಗಳ ಕೃಷಿ ಮಾಡುವುದನ್ನು ತಲತಲಾಂತರದಿಂದ ಮುಂದುವರೆಸಿರುತ್ತಾರೆ. ಇಂತಹ ಕಣ್ಮರೆಯಾಗುತ್ತಿರುವ 52 ದೇಸಿ ತಳಿಗಳನ್ನು ಗುರುತಿಸಿ ಅಗತ್ಯ ಪ್ರಮಾಣದ ಬಿತ್ತನೆ ಬೀಜವನ್ನು ಪಡೆದು ಸಂರಕ್ಷಣೆ ಹಾಗೂ ಅಭಿವೃದ್ಧಿಗಾಗಿ ಕೃಷಿ ವಿಶ್ವವಿದ್ಯಾಲಯ, ಬೆಂಗಳೂರಿನ ಬೀಜ ಬ್ಯಾಂಕಿನಲ್ಲಿ ಸಂಗ್ರಹಿಸಲು ಕಳುಹಿಸಲಾಗಿದೆ. ಸದರಿ ಯೋಜನೆಯಡಿ ಜಿಲ್ಲೆಯಲ್ಲಿ ದೇಸಿತಳಿಗಳನ್ನು ಸಂರಕ್ಷಿಸುವ 38 ರೈತರನ್ನು ಗುರುತಿಸಿ



ಅವರಿಂದ ಅಗತ್ಯವಾದ ಮಾಹಿತಿಯನ್ನು ಪಡೆದು ಕೆ–ಕಿಸಾನ್ ಆಪ್ನಲ್ಲಿ ನೊಂದಾಯಿಸಲಾಗಿದೆ. ಹಿಂದಿನಿಂದಲೂ ಸಂರಕ್ಷಿಸಿ ಕೃಷಿ ಮಾಡುತ್ತಿರುವ ರೈತರಿಗೆ ಹಾಗೂ ದೇಸಿ ತಳಿಗಳ ಜನಪ್ರಿಯತೆಗೆ ಬೆಂಬಲ ನೀಡುವ ಹಿನ್ನಲೆಯಲ್ಲಿ ಕೃಷಿ ಇಲಾಖೆ ಈ ಉತ್ತೇಜನ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಿರುತ್ತದೆ.

ಯೋಜನೆಯಡಿ ಮಲ್ಲಯ್ಯ ಗುರುಬಸಪ್ಪನಮಠ ಉರ್ಫ ಮಹಾಪುರುಷಮಠ ರೋಣ ಇವರು ದೇಸಿ ತಳಿಗಳ ಸಂರಕ್ಷಣೆಯಲ್ಲಿ ಗದಗ ಜಿಲ್ಲೆಯಲ್ಲಿ ಅಗ್ರಗಣ್ಯರಾಗಿದ್ದು ಹಲವಾರು ದೇಸಿ ತಳಿಗಳನ್ನು ಸಂರಕ್ಷಿಸಿ ಬೆಳೆಸುತ್ತಿದ್ದಾರೆ. ಅವುಗಳಲ್ಲಿ ಮುಖ್ಯವಾಗಿ ಕೆಂಪು ಅಲಸಂದಿ, ಪಚ್ಚೆ ಹೆಸರು, ಸ್ಥಳಿಯ ಅಣ್ಣಿಗೇರಿ ಜೋಳ, ಜವಾರಿ ಮಡಿಕೆ ಹಾಗೂ ಜವಾರಿ ಬೀಜಗಳಾಗಿವೆ.

ಇವರ ಸಾಧನೆಯನ್ನು ಕೃಷಿ ಇಲಾಖೆಯು ಗುರುತಿಸಿ, ಇವರಿಗೆ ದೇಸಿ ತಳಿಗಳ ಸಂರಕ್ಷಣೆಗಾಗಿ ಪ್ರಶಸ್ತಿ ಹಾಗೂ ಗೌರವಧನವನ್ನು ನೀಡಲಾಗಿದೆ. ಕೃಷಿ ಇಲಾಖೆಯ ಕೇಂದ್ರ ಕಛೇರಿಯಲ್ಲಿ ಏರ್ಪಡಿಸಿಲಾದ National Dialogue on Beeja Parampara conserving our past, cultivating our future (SEED-5C,2025) ರಲ್ಲಿ ಭಾಗವಹಿಸಿ ವಸ್ತುಪದರ್ಶನದಲ್ಲಿ ವಿವಿಧ ದೇಸಿ ತಳಿಗಳ ಬೀಜಗಳನ್ನು ಪ್ರದರ್ಶಿಸಿ ತಮ್ಮ ಅನುಭವವನ್ನು ಹಂಚಿಕೊಂಡಿದ್ದಕ್ಕಾಗಿ ಇಲಾಖೆಯ ಆಯುಕ್ತರು ಹಾಗೂ ಅಧಿಕಾರಿಗಳಿಂದ ಸನ್ಮಾನವನ್ನು ಪಡೆದಿರುತ್ತಾರೆ. ಅಲ್ಲದೇ ಜಿಲ್ಲೆಯಲ್ಲಿ ಅಷ್ಟೆ ಅಲ್ಲದೇ ವಿವಿಧ ರಾಜ್ಯದ ವಿವಿಧ ಭಾಗಗಳಲ್ಲಿ ಏರ್ಪಡಿಸಿದ ಕೃಷಿಗೆ ಸಂಬಂಧಿಸಿದ ಕೃಷಿ ಮೇಳ, ಜಾತ್ರೆಗಳು ಹಾಗೂ ಉತ್ಸವಗಳಲ್ಲಿ ಅತಿ ಉತ್ಸಾಹದಿಂದ ಭಾಗವಹಿಸಿ ವಸ್ತುಪರ್ಶನದಲ್ಲಿ ಪಾಲ್ಗೊಂಡು ಸನ್ಮಾನ ಹಾಗೂ ಪ್ರಮಾಣ ಪತ್ರಗಳನ್ನು ಪಡೆದುಕೊಂಡಿರುತ್ತಾರೆ.

ಅದೇ ರೀತಿಯಲ್ಲಿ ಸೆಪ್ಟೆಂಬರ್ 25 ರಿಂದ 28 ರವರೆಗೆ ಕೃಷಿ ವಿಶ್ವವಿದ್ಯಾಲಯ ಧಾರವಾಡದಿಂದ ಏರ್ಪಡಿಸಲಾದ ಕೃಷಿ ಮೇಳದಲ್ಲಿ ಗದಗ ಜಿಲ್ಲೆಯಿಂದ ಭಾಗವಹಿಸಿ ದೇಸಿ ತಳಿಗಳ ಸಂಗ್ರಹಣೆ ಹಾಗೂ ಉತ್ತೇಜನಕ್ಕಾಗಿ ಸಂಗ್ರಹಿಸಿದ ವಿವಿಧ ತಳಿಗಳ ದೇಸಿ ಬೀಜಗಳು, ವಿವಿಧ ಎತ್ತಿನ ತಳಿಗಳ ಮಾದರಿಗಳು ಹಾಗೂ ಕೃಷಿ ಉಪಕರಣಗಳ ಮಾದರಿಗಳ ಪ್ರದರ್ಶನಕ್ಕಾಗಿ ಕೃಷಿ ಮೇಳದಲ್ಲಿ ಗದಗ ಜಿಲ್ಲಾ ಮಟ್ಟದ ಆವಿಷ್ಕಾರಿ / ಸಾಧಕ ರೈತ ಪ್ರಶಸ್ತಿಯನ್ನು ಹಾಗೂ ಗೌರವ ಸ್ಮರಣಿಕೆಯನ್ನು ನೀಡಿದ್ದು ನಿಜಕ್ಕೂ ಶ್ಲಾಘನಿಯ ಅವರಲ್ಲಿರುವ ಉತ್ಸಾಹ ಹಾಗೂ ಪರಿಶ್ರಮವು ಯುವ ರೈತರಿಗೆ ಮಾದರಿಯಾಗುವಂತಿದೆ ಜಂಟಿ ಕೃಷಿ ನಿರ್ದೇಶಕಿ ಶ್ರೀಮತಿ ಚೇತನಾ ಪಾಟೀಲ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಗದಗ ಜಿಲ್ಲೆಯಲ್ಲಿ 946 ವಿದ್ಯಾರ್ಥಿಗಳಿಗೆ 10 ಕೋ.ರೂ. ಶಿಷ್ಯವೇತನ: ಉಮಾ

**ಸತ್ಯಮಿಥ್ಯ ಸುದ್ದಿಮೂಲ ಗದಗ :** ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ವಿವಿಧ ಕಾರ್ಯಕ್ರಮಗಳಲ್ಲಿ ಒಂದಾದ ಸುಜ್ಞಾನವಿಧಿ ಶಿಷ್ಯವೇತನ ಯೋಜನೆಯ ಅರ್ಹ ಸದಸ್ಯರ ಕುಟುಂಬದ ವಿದ್ಯಾರ್ಥಿಗಳಿಗೆ ತಾಂತ್ರಿಕ ಹಾಗೂ ವೃತ್ತಿಪರ ಶಿಕ್ಷಣ ರಂಗಕ್ಕೆ ನೆರವಾಗುವಲ್ಲಿ ಯಶಸ್ವಿಯಾಗಿದ್ದು ಇದುವರೆಗೂ ರಾಜ್ಯಾದ್ಯಂತ 1,37,165 ವಿದ್ಯಾರ್ಥಿಗಳಿಗೆ 186 ಕೋ. ರೂ. ಶಿಷ್ಯವೇತನವನ್ನು ವಿತರಿಸಲಾಗಿದ್ದು ಗದಗ ಜಿಲ್ಲೆಯಲ್ಲಿ ಈವರೆಗೆ 946 ವಿದ್ಯಾರ್ಥಿಗಳಿಗೆ 10 ಕೋ.ರೂ. ಶಿಷ್ಯವೇತನ ವಿತರಿಸಲಾಗಿದೆ ಎಂದು ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಗದಗ ತಾಲೂಕು ಯೋಜನಾಧಿಕಾರಿ ಶ್ರೀಮತಿ ಉಮಾ ಅವರು ಹೇಳಿದರು.

ನಗರದ ಜಿಲ್ಲಾ ಕಛೇರಿಯಲ್ಲಿ ಅವರು 2025–26 ನೇ ಸಾಲಿನಲ್ಲಿ ಆಯ್ಕೆಯಾದ 40 ವಿದ್ಯಾರ್ಥಿನಿಯರಿಗೆ ಶಿಷ್ಯವೇತನದ ಮಂಜೂರಾತಿ ಪತ್ರ ವಿತರಣಾ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ, ಶ್ರೀ ಕ್ಷೇತ್ರ ಧರ್ಮಸ್ಥಳದಿಂದ ಕೊಡ ಮಾಡಿದ ಶಿಷ್ಯವೇತನವನ್ನು ವಿದ್ಯಾರ್ಥಿನಿಯರು ಭವಿಷ್ಯದ ನಿಧಿ ಎಂದು ಪರಿಗಣಿಸಿ ಇದನ್ನು ಸದುಪಯೋಗ ಪಡೆಸಿಕೊಂಡು, ಉತ್ತಮ ಶಿಕ್ಷಣ ಪಡೆದು ಕುಟುಂಬಕ್ಕೆ ಮತ್ತು ಸಮಾಜಕ್ಕೆ ಉತ್ತಮ ಕೊಡುಗೆ ನೀಡಬೇಕು ಎಂದು ಹಾರೈಸಿದರು.

ರೈತ ಸಂಘದ ಅಧ್ಯಕ್ಷರಾದ ಪರಮೇಶಪ್ಪ ಜಂತ್ಲಿ ಅವರು ಮಾತನಾಡಿ, ಶ್ರೀ ಕ್ಷೇತ್ರ ಧರ್ಮಸ್ಥಳ ಸಂಘವು ಸಾಮಾಜಿಕ ಕ್ಷೇತ್ರಕ್ಕೆ ತನ್ನದೇ ಆದ ವಿಶೇಷ ಕೊಡುಗೆ ನೀಡಿದೆ. ಈ ಸಂಸ್ಥೆಯು ಮಹಿಳೆಯರಿಗೆ, ಮಕ್ಕಳಿಗೆ, ವೃದ್ಧರಿಗೆ,



ಅಂಗವಿಕಲರಿಗೆ, ವಿಧವೆಯರಿಗೆ, ಮದ್ಯವ್ಯಸನಿಗಳಿಗೆ, ರೈತರಿಗೆ ಹಾಗೂ ಸುತ್ತಮುತ್ತಲಿನ ಹಲವಾರು ಗ್ರಾಮಗಳಿಗೆ ವಿವಿಧ ಯೋಜನೆಗಳನ್ನು ಜಾರಿಗೆ ತಂದು ಅವುಗಳನ್ನು ಯಶಸ್ವಿಗೊಳಿಸುವ ಮೂಲಕ ಧರ್ಮಸ್ಥಳ ಶ್ರೀಕ್ಷೇತ್ರದ ಧರ್ಮಾಧಿಕಾರಿಗಳಾದ ಪೂಜ್ಯಶ್ರೀ ವೀರೇಂದ್ರ ಹೆಗ್ಗಡೆಯವರ ಕನಸನ್ನು ನನಸನ್ನಾಗಿ ಮಾಡಿದ ಈ ಸಂಸ್ಥೆಯಿಂದ ಇನ್ನಷ್ಟು ಯೋಜನೆಗಳು ಜಾರಿಗೆ ಬಂದು ಸದೃಢ ಸಮಾಜಕ್ಕೆ ಭದ್ರ ಬುನಾದಿಯಾಗಲಿ ಎಂದು ಹೇಳಿದರು. ವಿಬಿಐ ನ್ಯೂಸ್‌ನ ಸಂಪಾದಕರು ಹಾಗೂ ಜಿಲ್ಲಾ ಜನಜಾಗೃತಿ ವೇದಿಕೆಯ ಸದಸ್ಯರಾದ ವೆಂಕಟೇಶ ಇಮರಾಪೂರ ಅವರು ಮಾತನಾಡಿ, ಮಹಿಳೆಯರಿಗೆ ಹಣಕಾಸಿನ ಶಿಸ್ತನ್ನು ಕಲಿಸಿ ಅವರನ್ನು ಸ್ವಾವಲಂಬಿ ಬದುಕಿಗೆ ಈ ಸಂಸ್ಥೆಯು ದಾರಿ ಮಾಡಿಕೊಟ್ಟಿದೆ. ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಹಲವಾರು ಮಹತ್ವದ ಯೋಜನೆಗಳಿಂದ ಇಂದಿನ ಸಾಕಷ್ಟು ಜನರಿಗೆ ಬದುಕು ಕಟ್ಟಿಕೊಳ್ಳಲು ಸಾಧ್ಯವಾಗಿದೆ. ಸರಕಾರ ಮಾಡದ ಯೋಜನೆಗಳನ್ನು ಈ ಸಂಸ್ಥೆಯು ಮಾಡಿ ನಾಡಿನ ಜನರ ಮನದಲ್ಲಿ ಮನೆ ಮಾಡಿದೆ. ಸಂಸ್ಥೆಯ ಯೋಜನೆಗಳನ್ನು ಸದುಪಯೋಗ ಪಡಿಸಿಕೊಂಡು ಸ್ವಾವಲಂಬಿ ಜೀವನ ನಡೆಸಲು ಎಲ್ಲರೂ ಮುಂದೆ ಬರಬೇಕು. ವಿದ್ಯಾರ್ಥಿಗಳಿಗೆ ಶಿಷ್ಯವೇತನ ಶ್ರೀ ಕ್ಷೇತ್ರದ ಪುಣ್ಯಪ್ರಸಾದದಂತಿದೆ ಈ ಶಿಷ್ಯವೇತನನ್ನು ಸದ್ವಿನಿಯೋಗ ಮಾಡಿಕೊಂಡು ಉನ್ನತ ಶಿಕ್ಷಣ ಪಡೆದು ಸಮಾಜಕ್ಕೆ ಕೊಡುಗೆಯಾಗಿ ನೀಡಬೇಕು ಎಂದು ಹೇಳಿದರು.

ಇನ್ನೋರ್ವ ಪ್ರಗತಿಪರ ರೈತರಾದ ಫಕ್ಕೀರಪ್ಪ (ಮುತ್ತು) ಜಡಿ ಅವರು ಮಾತನಾಡಿ, ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಸ್ಥೆಯಿಂದ ಮೇಲು–ಕೀಳು, ಬಡವ–ಶ್ರೀಮಂತ ಎಂದು ಭೇದ–ಭಾವ ಮಾಡದೆ ಯೋಜನೆಗಳನ್ನು ಎಲ್ಲರಿಗೂ ಸಮರ್ಪಕವಾಗಿ ಅನುಷ್ಠಾನಗೊಳಿಸುವ ಮೂಲಕ ಒಂದು ವಿಶೇಷ ಸಂಸ್ಥೆಯಾಗಿ ಹೊರಹೊಮ್ಮಿದೆ ಎಂದು ಹೇಳಿದರು.

ಇದೇ ಸಂದರ್ಭದಲ್ಲಿ 2025–26 ನೇ ಸಾಲಿನ ಸುಮಾರು 40 ವಿದ್ಯಾರ್ಥಿನಿಯರಿಗೆ ಶಿಷ್ಯವೇತನದ ಮಂಜೂರಾತಿ ಪತ್ರವನ್ನು ವಿತರಿಸಲಾಯಿತು.

ಸತ್ಯ ಮಿಥ್ಯ
ನಿಮ್ಮ ಪ್ರತಿಬಿಂಬ ಕನ್ನಡ ದಿನ ಪತ್ರಿಕೆ

SATY MITHI
Kannada Daily Morning

# ಗದಗ ಜಿಲ್ಲಾ ಮಟ್ಟದ ಮ್ಯಾರಾಥಾನ ಸ್ಪರ್ಧೆ–2026

**ಸತ್ಯಮಿಥ್ಯ ಸುದ್ದಿಮೂಲ ಗದಗ :**
ಜಿಲ್ಲೆಯಲ್ಲಿ ಹೆಚ್.ಐ.ವಿ. ಪ್ರಮಾಣ ಇಳಿಮುಖವಾಗಿದ್ದು, ವಿದ್ಯಾರ್ಥಿಗಳು ಹೆಚ್.ಐ.ವಿ.ಏಡ್ಸ್ ಬಗ್ಗೆ ಮಾಹಿತಿ ತಿಳಿದುಕೊಂಡು ಸಮುದಾಯದಲ್ಲಿ ಜಾಗೃತಿ ಮೂಡಿಸಬೇಕೆಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ ಹೇಳಿದರು.

ನಗರದ ಜಿಲ್ಲಾಡಳಿತ ಭವನದಲ್ಲಿ ಮಂಗಳವಾರ ಸೆಪ್ಟೆಂಬರ್ (29) ರಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಕರ್ನಾಟಕ ರಾಜ್ಯ ಏಡ್ಸ್ ಪ್ರೀವೇನ್‌ಷನ್ ಸೋಸೈಟಿ ಬೆಂಗಳೂರು, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಏಡ್ಸ್ ತಡೆಗಟ್ಟುವಿಕೆ ಮತ್ತು ನಿಯಂತ್ರಣ ಘಟಕ, ಐ.ಎಮ್.ಎ, ರೋಟರಿ ಸೆಂಟ್ರಲ್ ಗದಗ, ಲಾಯನ್ಸ್ ಕ್ಲಬ್ ಗದಗ–ಬೆಟಗೇರಿ, ಶಿಕ್ಷಣ ಇಲಾಖೆ, ಭಾರತೀಯ ರೆಡ್‌ಕ್ರಾಸ್ ಸಂಸ್ಥೆ, ಕ್ರೀಡಾ ಇಲಾಖೆ, ರಕ್ಷಣೆ ಸಂಸ್ಥೆ, ಸೃಷ್ಟಿ ಸಂಕುಲ ಸಂಸ್ಥೆ, ಚೈತನ್ಯ ಸಂಸ್ಥೆ, ನವಚೇತನ ಸಂಸ್ಥೆ, ಗದಗ ಜಿಲ್ಲೆಯ ಎನ್.ಎಸ್.ಎಸ್. ಘಟಕಗಳು ಹಾಗೂ ರೆಡ್‌ರಿಬ್ಬನ್ ಕ್ಲಬ್‌ಗಳ ಸಂಯುಕ್ತಾಶ್ರಯದಲ್ಲಿ ಹೆಚ್.ಐ.ವಿ/ಏಡ್ಸ್ ತಡೆಗಟ್ಟಲು ತೀವ್ರತರವಾದ ಐ.ಇ.ಸಿ ಪ್ರಚಾರಾಂದೋಲನ–2026ರ ಅಂಗವಾಗಿ ರೆಡ್ ರಿಬ್ಬನ್ ಕಾಲೇಜು ವಿದ್ಯಾರ್ಥಿಗಳಿಗಾಗಿ 5 ಕಿ.ಮೀ. ಮ್ಯಾರಾಥಾನ ಸ್ಪರ್ಧೆಯನ್ನು ಜಿಲ್ಲಾಡಳಿತ ಭವನದಲ್ಲಿ ಏರ್ಪಡಿಸಲಾಗಿತ್ತು.

ಮೋಬಲೈಜೇಶನ್ ಫಾರ್ ಏಡ್ಸ್ ಸುರಕ್ಷಾ ಅಭಿಯಾನ ಆರಂಭವಾಗಿದ್ದು, ಈ ಅಭಿಯಾನದಲ್ಲಿ ಎಲ್ಲ ಸಮುದಾಯದವರು ನಿಮ್ಮ ಸ್ಥಿತಿಯನ್ನು ತಿಳಿದುಕೊಳ್ಳಿ ಎನ್ನುವ ವಿಷಯದೊಂದಿಗೆ ಎಲ್ಲರೂ ಕ್ಯೂ–ಆರ್‌ಕೋಡ್ ಸ್ಕ್ಯಾನ್ ಮಾಡುವ ಮುಖಾಂತರ ತಮ್ಮ ಸ್ಥಿತಿಗತಿಯನ್ನು ತಿಳಿದುಕೊಳ್ಳಲು ತಿಳಿಸಿದರು. ಹಾಗೂ ತೀವ್ರತರವಾದ ಐ.ಇ.ಸಿ. ಪ್ರಚಾರಾಂದೋಲನದ ಘೋಷ ವಾಕ್ಯದಂತೆ ಸುಸ್ಥಿರ ಡಿಜಿಟಲ್ ಅಭಿವೃದ್ಧಿಗಾಗಿ ಸ್ಥಳೀಯ ಯುಜನತೆಯ ಪಾತ್ರ ಹಾಗೂ ಗುರಿಗಳು ಘೋಷಣೆಯಂತೆ ಯುವಕರು ಸಂಯಮದಿಂದ ತಮ್ಮ ಭವಿಷ್ಯವನ್ನು ರೂಪಿಸಿಕೊಳ್ಳಲು ಸಧೃಢ ಆರೋಗ್ಯವನ್ನು ಹೊಂದಿ ಸಮೃದ್ಧ ಭಾರತವನ್ನು ನಿರ್ಮಾಣ ಮಾಡಲು ಕೈಗೂಡಿಸಬೇಕೆಂದು ಕರೆ ನೀಡಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಎಸ್. ಎಸ್. ನೀಲಗುಂದ ಮಾತನಾಡಿ ವಿದ್ಯಾರ್ಥಿಗಳು ಯವ್ವನದಲ್ಲಿ ತಮ್ಮ ಜೀವನವನ್ನು ಜೋಪಾನ ಮಾಡಿಕೊಂಡು ಆರೋಗ್ಯಕರ ನಡುವಳಿಕೆಗಳನ್ನು ರೂಪಿಸಿಕೊಳ್ಳಲು ಕರೆ ನೀಡಿದರು.

ಜಿಲ್ಲಾ ಏಡ್ಸ್ ನಿಯಂತ್ರಣಾಧಿಕಾರಿ ಡಾ. ಅರುಂಧತಿ ಕುಲಕರ್ಣಿರವರು ಮಾತನಾಡಿ ಹೆಚ್.ಐ.ವಿ. ಸೋಂಕಿನ ಪ್ರಮಾಣ ಇಳಿಮುಖವಾಗಿದ್ದು, ಜಿಲ್ಲೆಯ ಯುವ ಸಮುದಾಯ ಜಾಗೃತಿಯನ್ನು ಮೂಡಿಸಿ ಜಿಲ್ಲೆಯಲ್ಲಿ ಸೋಂಕಿನ ಪ್ರಮಾಣವನ್ನು ಸೊನ್ನೆಗೆ ತರಲು ಶ್ರಮಿಸಬೇಕೆಂದು ತಿಳಿಸಿದರು.

ಮ್ಯಾರಾಥಾನ ನಡೆಸುವ ಉದ್ದೇಶ ಹೆಚ್.ಏಡ್ಸ್. ಬಗ್ಗೆ ಅರಿವು, ಸೇವಾ ಸೌಲಭ್ಯಗಳ ಮಾಹಿತಿ, ಕಳಂಕ ಮತ್ತು ತಾರತಮ್ಯವನ್ನು ತಡೆಗಟ್ಟುವುದು, ಹೆಚ್.ಐ.ವಿ.ಏಡ್ಸತಡೆ ಕಾಯ್ದೆ–2017, ನ್ಯಾಕೋ , ಉಚಿತ ಸಹಾಯವಾಣಿ 1097, ಎಸ್,ಟಿ.ಐ. ಖಾಯಿಲೆಗಳು ಇತಾದಿ ವಿಷಯಗಳ ಬಗ್ಗೆ ವಿದ್ಯಾರ್ಥಿಗಳಿಗೆ ಅರಿವು ಮೂಡಿಸುವುದು ಈ ಸ್ಪರ್ಧೆಯ ಉದ್ದೇಶ ಎಂದು ಹೇಳಿದರು.

ಆರೋಗ್ಯವಂತ ಯುವ ಸಮುದಾಯ ದೇಶದ ಸಂಪನ್ಮೂಲವಾಗಿ ದೇಶದ ಅಭಿವೃದ್ಧಿಗೆ ಹಾಗೂ ಸಮಾಜದ ಒಳಿತಿಗಾಗಿ ಸೇವಾ ಮನೋಭಾವ ಬೆಳೆಸಿಕೊಳ್ಳಲು ತಿಳಿ ಹೇಳಿದರು. (ಹೆಚ್.ಐ.ವಿ. ಏಡ್ಸ್ ಮಾರಣಾಂತಿಕ ಖಾಯಿಲೆಯಾಗಿದ್ದು,

ಇದನ್ನುತಡೆಗಟ್ಟಲುಯುಜನರಲ್ಲಿಅರಿವು ಮತ್ತುಜಾಗೃತಿ ಮೂಡಿಸುವ ಸಲುವಾಗಿ ಇಲಾಖೆ ಹಾಗೂ ನಾನಾ ಸಂಘ ಸಂಸ್ಥೆಗಳ ಸಹಯೋಗದಲ್ಲಿ ಮ್ಯಾರಾಥಾನ ಸ್ಪರ್ಧೆ ಆಯೋಜಿಸಲಾಗಿದೆ ಎಂದರು.

ರೆಡ್‌ರಿಬ್ಬನ್ ಮ್ಯಾರಾಥಾನ ಸ್ಪರ್ಧೆಯನ್ನು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ ಹಾಗೂ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮುಕುಲ್ ಜೈನ್‌ರವರು ಹಸಿರು ನಿಶಾನೆ ತೋರಿಸುವ ಮೂಲಕ ಮ್ಯಾರಾಥಾನಗೆ ಚಾಲನೆ ನೀಡಿದರು.

ಮ್ಯಾರಾಥಾನ ಜನ ಜಾಗೃತಿ ಕಾರ್ಯಕ್ರಮದಲ್ಲಿ ಜಿ ಡಾ.ಈ.ಎಸ್. ಪಲ್ಲೇದ, ರೆಡ್‌ಕ್ರಾಸ್ ಸಂಸ್ಥೆಯ ಡಾ. ಆರ್.ಎನ್. ಗೋಡಬೋಲೆ ಹಾಗೂ ಜಿಲ್ಲೆಯ ಎಲ್ಲ ಐಸಿಟಿಸಿ, ಎ.ಆರ್.ಟಿ.ಡ್ಯಾಪ್ಕೂ ಸಿಬ್ಬಂದಿ, ಹಾಗೂ ಆರೋಗ್ಯ ಇಲಾಖೆಯ ಸಿಬ್ಬಂದಿ ವರ್ಗ ಹಾಗೂ ಶಿಕ್ಷಣ ಇಲಾಖೆಯ ಸಿಬ್ಬಂದಿ, ರಕ್ಷಣೆ ಸಂಸ್ಥೆಯ ಹಜರತ್ .ಬಿ ಮತ್ತು ಸಿಬ್ಬಂದಿ, ಸೃಷ್ಠಿ ಸಂಕುಲದ ಆದಿತ್ಯಾ, ಚೈತನ್ಯ ಸಂಸ್ಥೆಯ ನಾಗರಾಜ ಮತ್ತು ಸಿಬ್ಬಂದಿ, ನವಚೇತನ ಸಂಸ್ಥೆಯ ಸವಿತಾ ಹಾಗೂ ಎಲ್ಲ ಸಿಬ್ಬಂದಿ ಹಾಜರಿದ್ದರು.

ಮ್ಯಾರಾಥಾನ ಸ್ಪರ್ಧೆಯಲ್ಲಿ ಪುರುಷರಲ್ಲಿ ಪ್ರಥಮ ಸ್ಥಾನವನ್ನು ರಮೇಶ ಸಿಂಗಟಾನಕೇರಿ, ದ್ವಿತೀಯ ಸ್ಥಾನವನ್ನು ಗಂಗಾಧರ ಗಚ್ಚಿನಮಠ, ತೃತೀಯ ಸ್ಥಾನವನ್ನು ಪ್ರಶಾಂತ ಜಕ್ಕಮ್ಮನವರ ಪಡೆದುಕೊಂದಿದ್ದು ಪ್ರಶಸ್ತಿಗೆ ಭಾಜನರಾದರು. ವಿದ್ಯಾರ್ಥಿನಿಯರ ವಿಭಾಗದಲ್ಲಿ ಪ್ರಥಮ ಸ್ಥಾನವನ್ನು ಬಸಮ್ಮ ಕುರಿ, ದ್ವಿತೀಯ ಸ್ಥಾನವನ್ನು ಅನಸವ್ವ ಕಲ್ಲೂರ ತೃತೀಯ ಸ್ಥಾನವನ್ನು ಮಾಲತಿ ಉಮ್ಮಣ್ಣವರ ಪಡೆದುಕೊಂಡಿದ್ದು ಪ್ರಶಸ್ತಿ ಹಾಗೂ ಮೆಡಲ್‌ಗೆ ಭಾಜನರಾದರು. ಮ್ಯಾರಾಥಾನದಲ್ಲಿ ಸುಮಾರು 250 ವಿದ್ಯಾರ್ಥಿ/ವಿದ್ಯಾರ್ಥಿನಿಯರು ಭಾಗವಹಿಸಿದ್ದರು. ಮ್ಯಾರಾಥಾನ ಜಾಗೃತಿ ಯಶಸ್ವಿಯಾಯಿತು.

ಬಸವರಾಜ ಲಾಳಗಟ್ಟಿ ಸರ್ವರನ್ನು ಸ್ವಾಗತಿಸಿದರು. ರಾಜೇಂದ್ರ ಗಡಾದ ಕಾರ್ಯಕ್ರಮವನ್ನು ನಿರೂಪಿಸಿ ವಂದಿಸಿದರು.



# ಜಿಲ್ಲಾ ಮಟ್ಟದ 5 ಕಿ.ಮೀ. ಮ್ಯಾರಾಥಾನ್‌ನಲ್ಲಿ ಬಸಮ್ಮಾ ಕುರಿಗೆ ಪ್ರಥಮ ಸ್ಥಾನ

## ನರೇಗಲ್ಲ ಸರ್ಕಾರಿ ಪದವಿ ಕಾಲೇಜಿನ ವಿದ್ಯಾರ್ಥಿನಿಯ ಕ್ರೀಡಾ ಸಾಧನೆ; ರಾಜ್ಯಮಟ್ಟಕ್ಕೆ ಆಯ್ಕೆ

**ಸತ್ಯಮಿಥ್ಯ ಸುದ್ದಿಮೂಲ ನರೇಗಲ್ಲ :**
ಗ್ರಾಮೀಣ ಪ್ರತಿಭೆಯ ಓಟಕ್ಕೆ ಜಿಲ್ಲಾ ಮಟ್ಟದಲ್ಲಿ ಜಯದ ಗುರಿ ಸಿಕ್ಕಿದೆ. ನರೇಗಲ್ಲ ಪಟ್ಟಣದ ಮರಿಯಪ್ಪ ಬಾಳಪ್ಪ ಕಳಕೊಣ್ಣವರ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಬಿಕಾಂ ಪ್ರಥಮ ವರ್ಷದ ವಿದ್ಯಾರ್ಥಿನಿ ಬಸಮ್ಮಾ ಕುರಿ, ಗದಗದಲ್ಲಿ ಮಂಗಳವಾರ ನಡೆದ ಜಿಲ್ಲಾ ಮಟ್ಟದ 5 ಕಿ.ಮೀ. 'ರೆಡ್ ರಿಬ್ಬನ್ ರನ್' ಮ್ಯಾರಾಥಾನ್‌ನಲ್ಲಿ ಪ್ರಥಮ ಸ್ಥಾನ ಪಡೆದು ಕ್ರೀಡಾ ಕ್ಷೇತ್ರದಲ್ಲಿ ಗಮನಾರ್ಹ ಸಾಧನೆ ಮಾಡಿದ್ದಾರೆ.



ಗದಗ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಪಂಚಾಯತ, ಜಿಲ್ಲಾ ಏಡ್ಸ್ ತಡೆಗಟ್ಟುವಿಕೆ ಹಾಗೂ ನಿಯಂತ್ರಣ ಘಟಕ, ಶಿಕ್ಷಣ ಇಲಾಖೆ ಮತ್ತು ಕ್ರೀಡಾ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳ ಸಹಯೋಗದಲ್ಲಿ ಎಚ್‌ಐವಿ ತಡೆಗಟ್ಟುವಿಕೆ ಕುರಿತು ತೀವ್ರಗೊಳಿಸಿದ ಐಇಸಿ ಪ್ರಚಾರಾಂದೋಲನ–2026ರ ಅಂಗವಾಗಿ ಜಿಲ್ಲೆಯ ಕಾಲೇಜು ವಿದ್ಯಾರ್ಥಿಗಳಿಗಾಗಿ ಈ ಸ್ಪರ್ಧೆ ಆಯೋಜಿಸಲಾಗಿತ್ತು.

ಆರಂಭದಿಂದಲೇ ಉತ್ತಮ ವೇಗ ಕಾಯ್ದು–ಕೊಂಡ ಬಸಮ್ಮಾ ಕುರಿ, 5 ಕಿ.ಮೀ. ಓಟವನ್ನು ಯಶಸ್ವಿಯಾಗಿ ಪೂರ್ಣಗೊಳಿಸಿ ಎಲ್ಲರನ್ನು ಹಿಂದಿಕ್ಕುವ ಮೂಲಕ ಪ್ರಥಮ ಸ್ಥಾನ ಗಿಟ್ಟಿಸಿಕೊಂಡರು. ಸಾಧನೆಯ ಪ್ರತಿಫಲವಾಗಿ ₹5 ಸಾವಿರ ನಗದು ಬಹುಮಾನ ಹಾಗೂ ಪದಕ ಪಡೆದುಕೊಂಡ ಅವರು, ಇದೀಗ ರಾಜ್ಯಮಟ್ಟದ ಸ್ಪರ್ಧೆಗೆ ಆಯ್ಕೆಯಾಗಿದ್ದಾರೆ.

**ಗ್ರಾಮೀಣ ಪ್ರತಿಭೆಗೆ ರಾಜ್ಯಮಟ್ಟದ ವೇದಿಕೆ:** ಸಾಧನೆಗೆ ಹಿನ್ನೆಲೆಯಾಗಿರುವುದು ಕೇವಲ ಓಟದ ವೇಗವಲ್ಲ; ಗುರಿ ಮುಟ್ಟಬೇಕೆಂಬ ಛಲ. ಗ್ರಾಮೀಣ ಹಿನ್ನೆಲೆಯಿಂದ ಬಂದ ವಿದ್ಯಾರ್ಥಿನಿಯೊಬ್ಬಳು ಜಿಲ್ಲಾ ಮಟ್ಟದ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಪಡೆಯುವ ಮೂಲಕ ತನ್ನಲ್ಲಿರುವ ಕ್ರೀಡಾ ಪ್ರತಿಭೆಯನ್ನು ಅನಾವರಣಗೊಳಿಸಿರುವುದು ಸಹಪಾಠಿಗಳು ಹಾಗೂ ಕಾಲೇಜಿನ ಕ್ರೀಡಾಭಿಮಾನಿಗಳಲ್ಲಿ ಸಂತಸ ಮೂಡಿಸಿದೆ.

ಜಿಲ್ಲಾ ಮಟ್ಟದ ಸ್ಪರ್ಧೆಯಲ್ಲಿ ಕಾಲೇಜಿನ ದೈಹಿಕ ಶಿಕ್ಷಣ ನಿರ್ದೇಶಕ ವಿವೇಕಾನಂದ ಹಿರೇಮಠ ಅವರ ನೇತೃತ್ವದಲ್ಲಿ ಐವರು ಸ್ವಯಂಸೇವಕರು ಭಾಗವಹಿಸಿದ್ದರು. ಬಸಮ್ಮಾ ಅವರ ಸಾಧನೆ ಕಾಲೇಜಿನ ಕ್ರೀಡಾ ಚಟುವಟಿಕೆಗಳಿಗೆ ಹೊಸ ಉತ್ಸಾಹ ತುಂಬಿದ್ದು, ಇತರ ವಿದ್ಯಾರ್ಥಿಗಳಲ್ಲೂ ಕ್ರೀಡಾಸಕ್ತಿಗೆ ಪ್ರೇರಣೆ ನೀಡಿದೆ.

ವಿದ್ಯಾರ್ಥಿನಿಯ ಸಾಧನೆಗೆ ಕಾಲೇಜಿನ ಪ್ರಾಂಶುಪಾಲೆ ಡಾ. ಕಸ್ತೂರಿ ಬಿ. ದಳವಾಯಿ, ಎನ್‌ಎಸ್‌ಎಸ್ ಕಾರ್ಯಕ್ರಮಾಧಿಕಾರಿ ಸುನಂದಾ ಮುಂಜಿ, ದೈಹಿಕ ಶಿಕ್ಷಣ ನಿರ್ದೇಶಕ ವಿವೇಕಾನಂದ ಹಿರೇಮಠ, ಪ್ರಾಧ್ಯಾಪಕರು, ಅತಿಥಿ ಉಪನ್ಯಾಸಕರು, ಬೋಧಕೇತರ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಅಭಿನಂದನೆ ಸಲ್ಲಿಸಿದ್ದಾರೆ.

ಕಾಲೇಜು ಅಭಿವೃದ್ಧಿ ಮಂಡಳಿ ಅಧ್ಯಕ್ಷರು ಹಾಗೂ ಸದಸ್ಯರು ಬಸಮ್ಮಾ ಅವರ ಸಾಧನೆಗೆ ಹರ್ಷ ವ್ಯಕ್ತಪಡಿಸಿ, ರಾಜ್ಯಮಟ್ಟದ ಸ್ಪರ್ಧೆಯಲ್ಲೂ ಉತ್ತಮ ಪ್ರದರ್ಶನ ನೀಡಿ ಕಾಲೇಜು ಹಾಗೂ ಜಿಲ್ಲೆಗೆ ಕೀರ್ತಿ ತರಲಿ ಎಂದು ಶುಭ ಹಾರೈಸಿದ್ದಾರೆ.

# ಚೆನ್ನಾಗಿ ಓದಲು ಹೇಳಿದ್ದಕ್ಕೆ ಬಾಲಕ ಆತ್ಮಹತ್ಯೆ?

## ಮಲ್ಲೂರಿನಲ್ಲಿ ಮನಕಲಕುವ ಘಟನೆ; 16ರ ಹರೆಯದಲ್ಲೇ ಬದುಕಿಗೆ ವಿದಾಯ

**ಬ್ಯಾಡಗಿ:** ಎಸ್ಸೆಸ್ಸೆಲ್ಸಿ ಪರೀಕ್ಷೆ ಜೀವನ ಪ್ರಮುಖ ಘಟ್ಟ, ಟಿವಿ, ಮೊಬೈಲ್ ಜಾಸ್ತಿ ನೋಡಬೇಡ ಚೆನ್ನಾಗಿ ಓದಬೇಕು, ಜೀವನದಲ್ಲಿ ಎನನ್ನಾ ದರು ಸಾಧಿಸಿ ಉತ್ತಮವಾಗಿ ಬೆಳೆಯಬೇಕು ಎಂದು ಪೋಷಕರು ಬುದ್ದಿ ಹೇಳಿದ್ದಕ್ಕೆ ಮನನೊಂದು ಬಾಲಕನೋರ್ವ ಆತ್ಮಹತ್ಯೆಗೆ ಶರಣಾದ ಘಟನೆ ತಾಲೂಕಿನ ಮಲ್ಲೂರ ಗ್ರಾಮದಲ್ಲಿ ಸೋಮವಾರ ತಡರಾತ್ರಿ ನಡೆದಿದೆ.

ಮೃತ ಬಾಲಕನನ್ನು ಮಲ್ಲೂರ ಗ್ರಾಮದ ಹರ್ಷ ರಮೇಶ ಮೋರೆ (16) ಎಂದು ಗುರುತಿಸಲಾಗಿದೆ. ಸೋಮವಾರ ರಾತ್ರಿ ಸುಮಾರು 10.30ರ ವೇಳೆಗೆ ಘಟನೆ ನಡೆದಿದೆ ಎನ್ನಲಾಗಿದ್ದು, ಮನೆಯ ಮೇಲಿನ ಕೊಠಡಿ ಒಳಗೆ ಬಾಲಕ ನೇಣು ಬಿಗಿದುಕೊಂಡು ಆತ್ಮ ಹತ್ಯೆ ಮಾಡಿಕೊಂಡಿರುವುದಾಗಿ ತಿಳಿದುಬಂದಿದೆ. ಮನೆಯವರ ನಿರೀಕ್ಷೆ, ಓದಿನ ಒತ್ತಡ ಅಥವಾ ಬೇರೆ ಯಾವುದಾದರೂ ಕಾರಣ ಘಟನೆಗೆ ಕಾರಣವಾಗಿದೆಯೇ ಎಂಬುದು ತನಿಖೆಯಿಂದಷ್ಟೇ ಸ್ಪಷ್ಟವಾಗಬೇಕಿದೆ.

ಮುಗಿಲು ಮುಟ್ಟಿದ ಆಕ್ರಂದನ: ಚಿಕ್ಕ ವಯಸ್ಸಿನಲ್ಲೇ ಮಗನನ್ನು ಕಳೆದುಕೊಂಡ ಕುಟುಂಬದ ಆಕ್ರಂದನ ಮುಗಿಲು ಮುಟ್ಟಿದ್ದು, ಗ್ರಾಮದಲ್ಲಿ ಶೋಕದ ವಾತಾವರಣ ನಿರ್ಮಾಣವಾಗಿದೆ, ನಿನ್ನೆವರೆಗೂ ಮನೆಯಂಗಳದಲ್ಲಿಓಡಾಡಿಕೊಂಡಿದ್ದ,ಭವಿಷ್ಯದಕನಸುಕಾಣಬೇಕಿದ್ದ14 ರ ಹರೆಯದ ಬಾಲಕ ಇಂದು ಇಲ್ಲದಿರುವುದು ಕುಟುಂಬಸ್ಥರು ಹಾಗೂ ಗ್ರಾಮಸ್ಥರನ್ನು ಕಣ್ಣೀರಿನಲ್ಲಿ ಮುಳುಗಿಸಿದೆ.

ಒತ್ತಡ ಹಾಕುವುದು ಸರಿಯೇ:ಮಕ್ಕಳ ಮೇಲೆ ಉತ್ತಮ ಭವಿಷ್ಯದ ನಿರೀಕ್ಷೆ ಇಟ್ಟುಕೊಳ್ಳುವುದು ಸಹಜ. ಆದರೆ ಮಕ್ಕಳ ಮನಸ್ಸಿನ ಮೇಲೆ ಓದು, ಅಂಕಗಳು ಹಾಗೂ ನಿರೀಕ್ಷೆಗಳ ಒತ್ತಡ ಎಷ್ಟರ ಮಟ್ಟಿಗೆ ಪರಿಣಾಮ ಬೀರುತ್ತಿದೆ ಎಂಬುದರ ಬಗ್ಗೆ ಪೋಷಕರು ಹಾಗೂ ಸಮಾಜ ಗಂಭೀರವಾಗಿ ಚಿಂತಿಸಬೇಕಾದ ಅಗತ್ಯವಿದೆ. ಮಕ್ಕಳೊಂದಿಗೆ ಕೇವಲ ಓದಿನ ಬಗ್ಗೆ ಮಾತನಾಡುವುದಕ್ಕಿಂತ, ಅವರ ಮನಸ್ಸಿನ ಮಾತು ಕೇಳುವುದು, ಸಮಸ್ಯೆಗಳನ್ನು ಅರ್ಥಮಾಡಿಕೊಳ್ಳುವುದು ಹಾಗೂ ಅಗತ್ಯವಿದ್ದಾಗ ಮಾನಸಿಕ ಬೆಂಬಲ ನೀಡುವುದು ಅತ್ಯಂತ ಮುಖ್ಯವಾಗಿದೆ. ಘಟನೆ ಕುರಿತಂತೆ ಬ್ಯಾಡಗಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು ತನಿಖೆ ಮುಂದುವರೆದಿದೆ.

# ಸಮಾಜಮುಖಿ ಕೆಲಸಗಳಲ್ಲಿ ಸ್ವಯಂಸೇವಾ ಸಂಸ್ಥೆಗಳ ಪಾತ್ರ ಹಿರಿದು: ಮಾಜಿ ಸಚಿವ ಕಳಕಪ್ಪ ಬಂಡಿ ಆಶಯ

**ಸತ್ಯಮಿಥ್ಯ ಸುದ್ದಿಮೂಲ ರೋಣ:**
ಸಾಮಾಜಿಕಬದಲಾವಣೆಗೆಸರ್ಕಾರಿಯೋಜನೆಗಳಷ್ಟೇಸಾಲದುಖಾಸಗಿ ಹಾಗೂ ಸ್ವಯಂಸೇವಾ ಸಂಸ್ಥೆಗಳು ಸರ್ಕಾರದಷ್ಟೇ ಜವಾಬ್ದಾರಿಯಿಂದ ಸಮಾಜಮುಖಿ ಕಾರ್ಯಗಳಲ್ಲಿ ತೊಡಗಿಸಿಕೊಂಡಾಗ ಮಾತ್ರ ನೈಜ ಅಭಿವೃದ್ಧಿ ಸಾಧ್ಯ ಎಂದು ಮಾಜಿ ಸಚಿವ ಕಳಕಪ್ಪ ಬಂಡಿ ಹೇಳಿದರು.

ಪಟ್ಟಣದದೇಸಾಯಿಅವರವಾಡೆಯಆವರಣದಲ್ಲಿಆಯೋಜಿಸಲಾಗಿದ್ದ ದಿ. ಶ್ರೀ ವಿಜಯಕುಮಾರ ಸರ್ಜಾ ದೇಸಾಯಿ ಅವರ ನೆನಪಿನ 'ವಿಜಯಮಾರ್ಗ ಟ್ರಸ್ಟ್' ಉದ್ಘಾಟಿಸಿ ಅವರು ಮಾತನಾಡಿದರು.

ಪ್ರತಿಯೊಂದಕ್ಕೂ ಸರ್ಕಾರದ ನೆರವನ್ನೇ ನಿರೀಕ್ಷಿಸದೆ, ಸಮಾಜದ ಅಗತ್ಯಗಳನ್ನು ಗುರುತಿಸಿ ಸರ್ಕಾರದ ಯೋಜನೆಗಳು ತಲುಪಲು ತಡವಾಗುವ ಸ್ಥಳಗಳಲ್ಲಿ ಟ್ರಸ್ಟ್‌ಗಳು ಮುಂಚೂಣಿಯಲ್ಲಿ ನಿಂತು ಕೆಲಸ ಮಾಡಬೇಕು.

ಆಸ್ತಿ–ಪಾಸ್ತಿ, ಜಮೀನು ನೀಡುವುದು ನಿಜವಾದ ಸಂಪತ್ತಲ್ಲ; ಜ್ಞಾನ ಹಾಗೂ ಕೌಶಲ್ಯಗಳನ್ನು ಧಾರೆ ಎರೆಯುವುದೇ ನೈಜ ಆಸ್ತಿ. ಬರಿ ಗುಡಿ–ಗೋಪುರ ಅಥವಾ ಮಠಗಳನ್ನು ನಿರ್ಮಿಸುವುದು ಧರ್ಮವಲ್ಲ. ಬಡವರು, ನೇಕಾರರು ಹಾಗೂ ಶ್ರಮಿಕ ವರ್ಗಕ್ಕೆ ಆಸರೆಯಾಗಿ ನಿಂತು ಅವರ ಜೀವನದಲ್ಲಿ ಬೆಳಕು ಚೆಲ್ಲುವುದೇ ನಿಜವಾದ ಧರ್ಮವಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಡಾ. ಶಿವಲಿಂಗಾಚಾರ್ಯ ಸರ್ಜ ದೇಸಾಯಿ, ಮಲ್ಲಿಕಾರ್ಜುನ ಸರ್ಜದೇಸಾಯಿ, ದೇವರಾಜ ಸರ್ಜದೇಸಾಯಿ ಹಾಗೂ ಇಟಗಿ ಗ್ರಾಮದ ಪ್ರಮುಖರು ಉಪಸ್ಥಿತರಿದ್ದರು. ಅಭಿಷೇಕ್ ನಿರೂಪಿಸಿದರು.



# ರಾಜ್ಯಕ್ಕೆ 25 ಸಾವಿರ ಕೋಟಿ ಬರ ಪರಿಹಾರ ನೀಡಲಿ ಉನ್ನತ ಶಿಕ್ಷಣ ಸಚಿವ ಬಸವರಾಜ ರಾಯರಡ್ಡಿ ಹೇಳಿಕೆ

**ಯಲಬುರ್ಗಾ:** ರಾಜ್ಯದಲ್ಲಿ ಭೀಕರ ಬರಗಾಲದಿಂದರೈತರುಸಂಕಷ್ಟಕ್ಕೆಸಿಲುಕಿದ್ದಾ–ರೆ. ರಾಜ್ಯ ಸರ್ಕಾರ 210 ತಾಲೂಕುಗಳನ್ನು ಬರಪೀಡಿತ ತಾಲೂಕುಗಳೆಂದು ಘೋಷಿಸಿದೆ. ಈ ಹಿನ್ನೆಲೆಯಲ್ಲಿ ಕೇಂದ್ರ ಸರ್ಕಾರ ಕರ್ನಾಟಕಕ್ಕೆ 25 ಸಾವಿರ ಕೋಟಿ ಬರ ಪರಿಹಾರ ನೀಡಬೇಕು ಎಂದು ಉನ್ನತ ಶಿಕ್ಷಣ ಸಚಿವ ಬಸವರಾಜ ರಾಯರಡ್ಡಿ ಹೇಳಿದರು.

ತಾಲೂಕಿನ ಸಂಕನೂರು, ಹಿರೇಮ್ಯಾಗೇರಿ ಹಾಗೂ ಮುಧೋಳ ಗ್ರಾಮಗಳಲ್ಲಿ ಭಾನುವಾರ ಬ್ಲಾಕ್ ಕಾಂಗ್ರೆಸ್ ವತಿಯಿಂದ ಹಮ್ಮಿಕೊಂಡಿದ್ದ ಜನಸೇವಾ ಕಾರ್ಯಕ್ರಮದಲ್ಲಿ ಮಾತನಾಡಿದರು.

ರಾಜ್ಯ ಸರ್ಕಾರ ತನ್ನ ಪಾಲಿನ ಬರ ಪರಿಹಾರ ನೀಡಲಿದೆ. ಕರ್ನಾಟಕದಿಂದ ಪ್ರತಿವರ್ಷ ಕೇಂದ್ರ ಸರ್ಕಾರಕ್ಕೆ ಸುಮಾರು 4.50 ಲಕ್ಷ ಕೋಟಿ ತೆರಿಗೆ ಪಾವತಿಯಾಗುತ್ತಿದೆ. ಆದ–ರೆ ರಾಜ್ಯದ ಪಾಲಿನ ಹಣ ಸಮರ್ಪಕವಾಗಿ ದೊರೆಯುತ್ತಿಲ್ಲ. ಬರ ಪರಿಹಾರ ನೀಡುವ ವಿಚಾರದಲ್ಲಿ ಕೇಂದ್ರ ಸರ್ಕಾರ ನಿರ್ಲಕ್ಷ್ಯ ವಹಿಸುತ್ತಿದೆ ಎಂದು ಆರೋಪಿಸಿದರು.

## ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಭರವಸೆ:

ಹಿರೇಮ್ಯಾಗೇರಿಯಲ್ಲಿ 3 ಕೋಟಿ ವೆಚ್ಚದಲ್ಲಿ ನೂತನ ಕಸ್ತೂರಿಬಾ ಶಾಲೆ ನಿರ್ಮಾಣಕ್ಕೆ ಅನುದಾನ ನೀಡಲಾಗುವುದು. ಇದಕ್ಕಾಗಿ ಗ್ರಾಮಸ್ಥರು ಅಗತ್ಯ ಭೂಮಿ ಒದಗಿಸಬೇಕು. ಸಂಕನೂರಿನಲ್ಲಿ ನೂತನ ಬುದ್ಧ ಬಸವ ಭವನ ಹಾಗೂ ಮಸೀದಿ ನಿರ್ಮಾಣಕ್ಕೆ ಅನುದಾನ ನೀಡಲಾಗುವುದು. ಮುಧೋಳದಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಈಗಾಗಲೇ ಅನುದಾನ ಒದಗಿಸಲಾಗಿದ್ದು, ಗ್ರಾಮಸ್ಥರು ಅಭಿವೃದ್ಧಿ ಕಾರ್ಯಗಳಿಗೆ ಸಹಕಾರ ನೀಡಬೇಕು ಎಂದರು. ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಕೆರಿಬಸಪ್ಪ ನಿಡಗುಂದಿ ಮಾತನಾಡಿದರು. ಈ ಸಂದರ್ಭ ಮುಖಂಡರಾದ ಆನಂದ ಉಳ್ಳಾಗಡ್ಡಿ, ಶರಣಪ್ಪ ಗಾಂಜಿ, ಹೇಮರೆಡ್ಡಿ ರಡ್ಡೇರ್, ರಾಜಶೇಖರ ನಿಂಗೋಜಿ, ಚಂದ್ರು ದೇಸಾಯಿ, ಹಂಪಯ್ಯಸ್ವಾಮಿ ಹಿರೇಮಠ, ಮಲ್ಲಿಕಾರ್ಜುನ ಜಕ್ಕಲಿ, ಸಂಗಣ್ಣ ತೆಂಗಿನಕಾಯಿ, ಈರಪ್ಪ ಕುಡಗುಂಟಿ, ಸಂಗಮೇಶ ಗುತ್ತಿ, ಮಹಾಂತೇಶ ಗಾಣಗೇರ, ಅಂದಪ್ಪ ಸುಬೇದಾರ, ಶಿವಾನಂದ ಬಣಕಾರ, ಶಿವರಡ್ಡೆಪ್ಪ ತೋಟದ್, ಅಶೋಕ ಮಾಲಿಪಾಟೀಲ್, ಸಿದ್ದು ಪಾಟೀಲ್, ಕಲ್ಲನಗೌಡ ಪಾಟೀಲ್, ಹನುಮಗೌಡ ಮಾಲಿಪಾಟೀಲ್, ಕಳಕಪ್ಪ ಕುರಿ, ಬಸಪ್ಪ ಅಕ್ಕಿ, ಛತ್ರಪ್ಪ ಛಲವಾದಿ, ಮಲ್ಲೇಶಗೌಡ ಮಾಲಿಪಾಟೀಲ್, ಯಲ್ಲಪ್ಪ ಹುನಗುಂದ, ಎಚ್.ಎಚ್.ಹಿರೇಮನಿ ಸೇರಿದಂತೆ ಮತ್ತಿತರರು ಇದ್ದರು.



# ರಾಜ್ಯಮಟ್ಟದ ಪುರುಷರ ಕಬಡ್ಡಿ ಪಂದ್ಯಾವಳಿ

**ಉಕ್ಕುಂದ:** ಗೌರಿ–ಗಣೇಶ ಹಬ್ಬದ ಅಂಗವಾಗಿ ತಾಲೂಕಿನ ಉಕ್ಕುಂದ ಗ್ರಾಮದಲ್ಲಿಶ್ರೀಬಸವೇಶ್ವರಯುವಕಮಂಡಲದಸಂಯುಕ್ತಆಶ್ರಯದಲ್ಲಿ ದ್ವಿತೀಯ ಬಾರಿಗೆ ಪುರುಷರ ರಾಜ್ಯಮಟ್ಟದ ಹೊನಲು ಬೆಳಕಿನ ಕಬಡ್ಡಿ ಪಂದ್ಯಾವಳಿ ಆಯೋಜಿಸಲಾಗಿದೆ.

ಅ.1ರಂದು ಗುರುವಾರ ಸಂಜೆ 4 ಗಂಟೆಗೆ ಗ್ರಾಮದ ಶ್ರೀ ಬಸವೇಶ್ವರ ದೇವಸ್ಥಾನದಆವರಣದಲ್ಲಿಪಂದ್ಯಾವಳಿನಡೆಯಲಿದೆ.ಪಂದ್ಯಾವಳಿಯಲ್ಲಿ ವಿಜೇತ ತಂಡಕ್ಕೆ ರೂ15 ಸಾವಿರ, ದ್ವಿತೀಯ ಸ್ಥಾನಕ್ಕೆ ರೂ.10 ಸಾವಿರ ಹಾಗೂ ತೃತೀಯ ಸ್ಥಾನಕ್ಕೆ ರೂ.5 ಸಾವಿರ ನಗದು ಬಹುಮಾನ ಹಾಗೂ ಪಾರಿತೋಷಕಗಳನ್ನು ನೀಡಲಾಗುವುದು.

ಪಂದ್ಯಾವಳಿಯಲ್ಲಿ ಭಾಗವಹಿಸುವ ಆಟಗಾರರು ಕಡ್ಡಾಯವಾಗಿ ಆಧಾರ್ ಕಾರ್ಡ್ ಹೊಂದಿರಬೇಕು. ಒಂದು ತಂಡದಲ್ಲಿ ಆಡಿದ ಆಟಗಾರರು ಮತ್ತೊಂದು ತಂಡದ ಪರವಾಗಿ ಆಡಲು ಅವಕಾಶ ಇರುವುದಿಲ್ಲ. ನಿರ್ಣಾಯಕರ ತೀರ್ಪು ಅಂತಿಮವಾಗಿದ್ದು, ಆಟದ ಸಂದರ್ಭದಲ್ಲಿ ಅನುಚಿತ ವರ್ತನೆ ಕಂಡುಬಂದಲ್ಲಿ ಅಂತಹ ತಂಡವನ್ನು ಪಂದ್ಯಾವಳಿಯಿಂದ ಅನರ್ಹಗೊಳಿಸಲಾಗುವುದು. ಭಾಗವಹಿಸುವ ಎಲ್ಲ ಆಟಗಾರರಿಗೆ ಊಟದ ವ್ಯವಸ್ಥೆ ಮಾಡಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಮೋ; 9380003670, 9535149727, 8050286065 ಹಾಗೂ 9632173553 ಸಂಖ್ಯೆಗೆ ಸಂಪರ್ಕಿಸಬಹುದು. ಕ್ರೀಡಾಭಿಮಾನಿಗಳು ಹಾಗೂ ಕಬ್ಬಡ್ಡಿ ತಂಡಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಪಂದ್ಯಾವಳಿಯನ್ನು ಯಶಸ್ವಿಗೊಳಿಸುವಂತೆ ಶ್ರೀ ಬಸವೇಶ್ವರ ಯುವಕ ಮಂಡಲದ ಪದಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

SATYAMITHI KANNADA DAILY MORNING OWNER, PUBLISHER, BY: CHANNAVEERAPPA NINGAPPA SAMAGANDI PUBLISHED FROM: KELAGAL{ETH, NEAR BASAVESHWAR DEVASTAN, HOME NO. 169, WARD NO, 4 MAIN ROAD GAJEDRAGAD, GADAG KARNATAKA - 582114 PRINTED AT: MAILARALINGESHWAR PRINTERS, WARD NO, 3, SUDI TQ, GAJENDRAGAD, GADAG, KARNATAKA- 582114